11 ಅಕ್ಟೋಬರ್ 2025 ಶನಿವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 211 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629

ಜನಮನದ ದನಿ

# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ



2ನೇ ಟೆಸ್ಟ್ ಪಂದ್ಯದಲ್ಲಿ ಇಂಡಿಯಾ ತಂಡದ ಎಡಗೈ ಆರಂಭಿಕ ಬ್ಯಾಟರ್ ಯಶಸ್ವಿ ಜೈಸ್ವಾಲ್ ಅಮೋಘ ಶತಕದ ಸಾಧನೆ ಮಾಡಿದ್ದಾರೆ.


ಅಸಮಾನ್ಯ ಜಗತ್ತಿನ ಸಾಮಾನ್ಯ ಬದುಕು ಇತಿಹಾಸವಾಗುವುದಿಲ್ಲ » 2


ಪ್ರತಿಯೊಬ್ಬರಿಗೂ ಮಾನಸಿಕ ಆರೋಗ್ಯ ಬಹಳ ಅವಶ್ಯಕ » 3


ಸಹಕಾರ ವೃದ್ಧಿ ಪಡಿಸುವ ಮಾರ್ಗಗಳ ಕುರಿತು ಚಿಂತನೆ » 4

# ಬಿಹಾರ ಚುನಾವಣೆ ಬಳಿಕ ಕ್ಷಿಪ್ರ ಬೆಳವಣಿಗೆ

## ರಾಜ್ಯ ಸರ್ಕಾರದ ಕುರಿತು ಬಿಜೆಪಿ ಭವಿಷ್ಯ | ಕರ್ನಾಟಕ ಕಾಂಗ್ರೆಸ್ ಎಟಿಎಂ | ಅ.13ಕ್ಕೆ ಸಿಎಂ ಔತಣಕೂಟ

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಎರಡೂವರೆ ವರ್ಷ ಪೂರ್ಣಗೊಳ್ಳುವ ಸಮಯ ಸನ್ನಿಹಿತವಾಗಿರುವ ಮಧ್ಯೆಯೇ ಸಚಿವ ಸಂಪುಟ ಪುನಾರಚನೆಯಾಗುತ್ತದೆ ಎನ್ನಲಾಗಿದ್ದು, ಈ ನಡುವೆ ರಾಜ್ಯ ಸರ್ಕಾರದಲ್ಲಿ ಕ್ಷಿಪ್ರ ಬೆಳವಣಿಗೆ ಆಗಲಿದೆ ಎಂದು ಬಿಜೆಪಿ ನಾಯಕರು ಹೇಳುತ್ತಿರುವುದು ರಾಜಕೀಯ ಪಡಸಾಲೆಯಲ್ಲಿ ತರಹೇವಾರಿ ಚರ್ಚೆಗೆ ಎಡೆಮಾಡಿಕೊಟ್ಟಿದೆ.

ಬಿಹಾರ ಚುನಾವಣೆಗೆ ಕಾಂಗ್ರೆಸ್ ಶಾಸಕ ಕೆ.ಸಿ.ವಿರೇಂದ್ರ 300 ಕೋ. ರೂ. ನೀಡಿದ್ದಾರೆಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಆರೋಪಿಸಿದ್ದರೆ, ಬಿಹಾರ ಚುನಾವಣೆ ಬಳಿಕ ರಾಜ್ಯ ರಾಜಕಾರಣದಲ್ಲಿ ಭಾರೀ ಬದಲಾವಣೆ ಆಗಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಭವಿಷ್ಯ ನುಡಿದಿದ್ದಾರೆ. ಮತ್ತೊಂದೆಡೆ ಗುರುವಾರ ದಲಿತ ಸಚಿವರಾದ ಸತೀಶ್ ಜಾರಕಿಹೊಳಿ, ಡಾ.ಹೆಚ್.ಸಿ. ಮಹದೇವಪ್ಪ,ಡಾ.ಜಿ. ಪರಮೇಶ್ವರ್ ಸಭೆ ನಡೆಸಿದ್ದು ಕುತೂಹಲ ಕೆರಳಿಸಿದೆ.



**ಕಾಂಗ್ರೆಸ್ ಹೈಕಮಾಂಡ್‌ಗೆ 300 ಕೋ. ರೂ.**

ಬೆಟ್ಟಿಂಗ್ ಹಗರಣದಲ್ಲಿ ಸಿಕ್ಕಿಬಿದ್ದಿರುವ ಕಾಂಗ್ರೆಸ್ ಶಾಸಕ ಕೆ.ಸಿ. ವೀರೇಂದ್ರ, ಬಿಹಾರ ಚುನಾವಣೆಗಾಗಿ ಕಾಂಗ್ರೆಸ್ ಹೈಕಮಾಂಡ್‌ಗೆ 300 ಕೋ. ರೂ. ಕೊಟ್ಟು ಮಂತ್ರಿ ಸ್ಥಾನಗಿಟ್ಟಿಸಲು ಪ್ರಯತ್ನಿಸಿದ್ದಾರೆಂದು ಆರ್. ಅಶೋಕ್ ಆರೋಪಿಸಿದ್ದಾರೆ. ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರ ರಾಹುಲ್ ಗಾಂಧಿ ಅವರ ಪಾಲಿಗೆ ಎಟಿಎಂ ಸರ್ಕಾರ ಎನ್ನುವುದಕ್ಕೆ ಇದಕ್ಕಿಂತ ಸಾಕ್ಷಿ ಬೇಕಾ. ವೀರೇಂದ್ರ ಕರ್ಮಕಾಂಡ ನೋಡುತ್ತಿದ್ದರೆ ಇನ್ನು ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಮತ್ತು ಸಚಿವರು ತಮ್ಮ ಕುರ್ಚಿ ಉಳಿಸಿಕೊಳ್ಳಲು ಇನ್ನ್ಯಾವ ಪರಿ ಲೂಟಿ ಮಾಡಿ ಹೈಕಮಾಂಡ್‌ಗೆ ಕಪ್ಪ ನೀಡುತ್ತಿರಬಹುದು ನೀವೇ ಊಹಿಸಿಕೊಳ್ಳಿ ಎಂದು ಹೇಳಿದ್ದಾರೆ.

ಒಂದು ಕಡೆ ಜನರಿಗೆ ಕ್ಯಾಸಿನೊ, ಜೂಜು, ಬೆಟ್ಟಿಂಗ್ ಆಡಿಸಿ ಬಡವರ ಮನೆ ಹಾಳು ಮಾಡಿ ಅಡ್ಡ ದಾರಿಯಲ್ಲಿ ದುಡ್ಡು ಮಾಡುವುದು. ಆ ಪಾಪದ ಹಣದಲ್ಲಿ ಟಿಕೆಟ್ ಪಡೆದು, ಚುನಾವಣೆ ಎದುರಿಸಿ, ಹೈಕಮಾಂಡ್‌ಗೆ ಕಪ್ಪ ಕೊಟ್ಟು ಮಂತ್ರಿಗಿರಿ ಗಿಟ್ಟಿಸಿಕೊಳ್ಳುವುದು. ಆ ಮೇಲೆ ಮಂತ್ರಿಗಿರಿ ಬಳಸಿಕೊಂಡು ಇನ್ನಷ್ಟು ಲೂಟಿ ಮಾಡುವುದು. ಇದು ಕಾಂಗ್ರೆಸ್ ಸರ್ಕಾರ ಕರ್ನಾಟಕದಲ್ಲಿ ಹೆಣೆದಿರುವ ವಿಷ ವರ್ತುಲ ಎಂದು ದೂರಿದರು.

ತೆಲಂಗಾಣ ವಿಧಾನಸಭೆ ಚುನಾವಣೆಗೆ, ಲೋಕಸಭಾ ಚುನಾವಣೆಗೆ ರಾಜ್ಯದ ವಾಲ್ಮೀಕಿ ನಿಗಮದ ಹಣ ಸೇರಿ ಸಾವಿರಾರು ಕೋಟಿ ರೂ. ಲಪಟಾಯಿಸಲಾಗಿದೆ. ಈಗ ಬಿಹಾರ ಚುನಾವಣೆಗೆ ಕನ್ನಡಿಗರ ತೆರಿಗೆ ಹಣ ಇನ್ನೆಷ್ಟು ಲೂಟಿ ಆಗುತ್ತದೆಯೋ ಗೊತ್ತಿಲ್ಲವೆಂದು ಅವರು ತಿಳಿಸಿದ್ದಾರೆ.

**ರಾಜಕೀಯ ಭೇಟಿಯಲ್ಲ- ಸಾಮಾನ್ಯ ಸಭೆ**

ಸಚಿವರಾದ ಸತೀಶ್ ಜಾರಕಿಹೊಳಿ ಹಾಗು ಡಾ.ಹೆಚ್.ಸಿ.ಮಹದೇವಪ್ಪ ಅವರ ಜೊತೆಗಿನ ಭೇಟಿ ಸಾಮಾನ್ಯ ಸಭೆ ಹೊರತು ರಾಜಕೀಯ ಚರ್ಚೆಯಲ್ಲವೆಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅವರು ಪ್ರತಿಕ್ರಿಯಿಸಿದ್ದಾರೆ. ನಾವು ಈ ಹಿಂದೆ ಹಲವು ಬಾರಿ ಭೇಟಿಯಾಗಿದ್ದೇವೆ. ನಾವು ಮೂವರು ಒಳ್ಳೆಯ ಸ್ನೇಹಿತರು. ನಮ್ಮ ಭೇಟಿಗೆ ವಿಶೇಷ ಅರ್ಥ ಕಲ್ಪಿಸುವ ಅಗತ್ಯವಿಲ್ಲವೆಂದರು.

**ಶೀಘ್ರ ತಾರ್ಕಿಕ ಅಂತ್ಯ**

ಬಿಹಾರ ವಿಧಾನಸಭಾ ಚುನಾವಣೆಯ ನಂತರ ರಾಜ್ಯದಲ್ಲಿನ ಹಲವಾರು ರಾಜಕೀಯ ಬೆಳವಣಿಗೆಗಳು ತಾರ್ಕಿಕ ಅಂತ್ಯ ತಲುಪುವ ನಿರೀಕ್ಷೆ ಇದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.

ಇತ್ತೀಚಿನ ಬೆಳವಣಿಗೆಗಳು ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ಎಲ್ಲವೂ ಸರಿಯಿಲ್ಲ ಎಂಬುದನ್ನು ಸೂಚಿಸುತ್ತವೆ. ಆಡಳಿತ ಪಕ್ಷದ ಸದಸ್ಯರೇ ಈ ಬಗ್ಗೆ ಸುಳಿವು ನೀಡುತ್ತಿದ್ದಾರೆ. ನವೆಂಬರ್‌ನಲ್ಲಿ ಕಾಂಗ್ರೆಸ್ ಸರ್ಕಾರ ತನ್ನ ಐದು ವರ್ಷಗಳ ಅವಧಿಯ ಅರ್ಧವನ್ನು ತಲುಪಿದಾಗ ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಮತ್ತು ಸಚಿವ ಸಂಪುಟ ಪುನರ್ ರಚನೆ ಬಗ್ಗೆ ವ್ಯಾಪಕ ಊಹಾಪೋಹಗಳು ಹರಡಿವೆ. ಕೆಲವರು ನವೆಂಬರ್‌ನಲ್ಲಿ ರಾಜಕೀಯ ಕ್ರಾಂತಿಯಾಗಲಿದೆ ಎಂದಿದ್ದಾರೆ. ಆಡಳಿತ ಪಕ್ಷದ ಸಚಿವರು ಮತ್ತು ಶಾಸಕರ ಪ್ರತಿಕ್ರಿಯೆ, ಕಾಂಗ್ರೆಸ್ ಪಕ್ಷದಲ್ಲಿ ಎಲ್ಲವೂ ಸರಿ ಇಲ್ಲವೆಂಬುದನ್ನು ಸ್ಪಷ್ಟಪಡಿಸುತ್ತವೆಂದರು.

# ವಸ್ತು ಪ್ರದರ್ಶನಕ್ಕೆ ಸಚಿವ ಕೃಷ್ಣಬೈರೇಗೌಡ ಚಾಲನೆ

• ಪ್ರಜೋದಯ ವರದಿ

**ಹಾಸನ:** ಹಾಸನಾಂಬ ಹಾಗು ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಅಂಗವಾಗಿ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಆವರಣದಲ್ಲಿ ಆಯೋಜಿಸಿರುವ ವಸ್ತು ಪ್ರದರ್ಶನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಶುಕ್ರವಾರ ಚಾಲನೆ ನೀಡಿದರು.

ಟೇಪ್ ಕತ್ತರಿಸಿ, ಪೋಸ್ಟರ್ ಬಿಡುಗಡೆ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪಶುಪಾಲನಾ ಇಲಾಖೆ, ಕೃಷಿ ಇಲಾಖೆ ಹಾಗು ಸ್ತ್ರೀ ಶಕ್ತಿ ಸಂಘಗಳು ತಯಾರಿಸುವ ವಸ್ತುಗಳ ಪ್ರದರ್ಶನ ಏರ್ಪಡಿಸಿದ್ದು, ಸಾರ್ವಜನಿಕರು ಭೇಟಿ ನೀಡುವ ಮೂಲಕ ಪ್ರೋತ್ಸಾಹಿಸಬೇಕೆಂದರು.

ಆಧುನಿಕತೆ ಬೆಳೆದಂತೆ ಗ್ರಾಮೀಣ ಸಂಸ್ಕೃತಿ ಮರೆಯಾಗುತ್ತಿದೆ. ಗ್ರಾಮ ಜೀವನ ಹೇಗಿರುತ್ತದೆಂಬುದಕ್ಕೆ ವಸ್ತು ಪ್ರದರ್ಶನ ಸಾಕ್ಷಿಯಾಗಿದೆ. ಅ.23ರ ವರೆಗೆ ಬೆಳಿಗ್ಗೆ 9 ರಿಂದ ರಾತ್ರಿ 8.30ರ ವರೆಗೆ ಪ್ರದರ್ಶನ ಇರಲಿದೆ. ಜಿಲ್ಲೆಯ ಯುವ ಉದ್ಯಮಿಗಳ ಉತ್ಕೃಷ್ಟ ಉತ್ಪನ್ನಗಳನ್ನು ಜಿಲ್ಲೆ ಮತ್ತು ಹೊರ ಜಿಲ್ಲೆಯ ಗ್ರಾಹಕರಿಗೆ ಇನ್ನಷ್ಟು ಪರಿಚಯಿಸಿ ಮಾರುಕಟ್ಟೆ ವ್ಯವಸ್ಥೆ ವೃದ್ಧಿಸುವುದು ಪ್ರಮುಖ ಉದ್ದೇಶ ಆಗಿದೆ. ವಸ್ತು ಪ್ರದರ್ಶನದಲ್ಲಿ ಸರ್ಕಾರದ ಸಹಾಯಧನ ಯೋಜನೆಗಳ ಫಲಾನುಭವಿಗಳು ಉದ್ಯಮಿಗಳಾಗಿ ಹೊರ ಹೊಮ್ಮಿ ರಾಜ್ಯ, ರಾಷ್ಟ್ರ ಮಾರುಕಟ್ಟೆ ಮೀರಿ ವಿದೇಶಗಳಿಗೆ ಉತ್ಪನ್ನ ಗಳನ್ನು ರಫ್ತು ಮಾಡುತ್ತಿರುವಂತೆ, ಅಂತಹ ಯೋಜನೆಗಳು ಮತ್ತು ಸರ್ಕಾರದ ಫಲಾನುಭವಿಗಳನ್ನು ನವ ಉದ್ಯಮ ಸ್ಥಾಪಿಸಲು ಕನಸು ಹೊತ್ತ ವರಿಗೆ ಪ್ರೇರಣೆಯಾಗಲೆಂದು ಪರಿಚಯಿಸಲಾಗುತ್ತಿದೆ ಎಂದು ಹೇಳಿದರು.



ವಸ್ತು ಪ್ರದರ್ಶನದಲ್ಲಿ ಉತ್ಪನ್ನಗಳನ್ನು ಗ್ರಾಹಕರಿಗೆ ಪರಿಚಯಿಸಿ ಖರೀದಿಸುವುದಷ್ಟೇ ಅಲ್ಲದೆ, ಮಾರುಕಟ್ಟೆ ವಿಸ್ತರಣೆಗೆ ವ್ಯವಹಾರ ಒಡಂಬಡಿಕೆಗಳನ್ನು ಹೋಲ್ ಸೇಲ್ ಖರೀದಿದಾರರು ಮತ್ತು ರಫ್ತುದಾರರಿಗೆ ರೂಪಿಸಿಕೊಳ್ಳಲು ಹೆಜ್ಜೆಯಾಗಿದೆ ಎಂದರು.

**50ಕ್ಕೂ ಹೆಚ್ಚು ಮಳಿಗೆಗಳು**

ವಸ್ತು ಪ್ರದರ್ಶನದಲ್ಲಿ 50ಕ್ಕೂ ಹೆಚ್ಚು ಮಳಿಗೆಗಳಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಪ್ರತಿ ಮಳಿಗೆಗೆ ಭೇಟಿ ನೀಡಿ ರೇಷ್ಮೆ ಬಟ್ಟೆ, ಊದುಬತ್ತಿ ತಯಾರಿಕಾ ವಿಧಾನ ಕೇಳಿದರು. ಆಕರ್ಷಣೀಯ ವಸ್ತುಪ್ರದರ್ಶನಕ್ಕೆ ಅವಕಾಶ ರೂಪಿಸುವುದರ ಜೊತೆಗೆ ವಿವಿಧ ನವೀನ ಕೃಷಿ ಯಂತ್ರೋಪಕರಣಗಳ ವೀಕ್ಷಣೆಗೂ ಅವಕಾಶ ಕಲ್ಪಿಸಲಾಗಿದೆ. ಇಲ್ಲಿರುವ ವಿಶೇಷ ತಳಿಯ ಕುರಿಗಳನ್ನು ಕಂಡು ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು. ಸಂಸದ ಶ್ರೇಯಸ್ ಪಟೇಲ್, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ. ಕೃಷಿ ಇಲಾಖೆ ಜಂಟಿ ನಿರ್ದೇಶಕ ರಮೇಶ್‌ಕುಮಾರ್ ಇತರರಿದ್ದರು.

# ಹಾಸನಾಂಬ ಗುರುತಿನ ಚೀಟಿ ದುರುಪಯೋಗ: ಇಬ್ಬರು ವಾರ್ಡನ್‌ಗಳ ಅಮಾನತು

• ಪ್ರಜೋದಯ ವರದಿ

**ಹಾಸನ:** ಹಾಸನಾಂಬ ಜಾತ್ರಾ ಮಹೋತ್ಸವ ಕರ್ತವ್ಯಕ್ಕೆ ನಿಯೋಜಿಸಿದ್ದ ಸಮಾಜ ಕಲ್ಯಾಣ ಇಲಾಖೆ ಹಾಸ್ಟೆಲ್‌ನ ಇಬ್ಬರು ವಾರ್ಡನ್‌ಗಳು ತಮಗೆ ನೀಡಿದ್ದ ಕರ್ತವ್ಯದ ಗುರುತಿನ ಚೀಟಿಯನ್ನು ಅನ್ಯರಿಗೆ ಕೊಟ್ಟ ತಪ್ಪಿಗೆ ಅಮಾನತುಗೊಂಡಿದ್ದಾರೆ.

ಅರಕಲಗೂಡು ತಾಲ್ಲೂಕು ದೊಡ್ಡಬೆಮ್ಮತ್ತಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದ ವಾರ್ಡನ್ ಆನಂದ್ ಹಾಗು ಬೇಲೂರು ತಾಲ್ಲೂಕು ಹಳೇಬೀಡು ಹಾಸ್ಟೆಲ್‌ನ ರಮೇಶ್ ಅವರನ್ನು ಅಮಾನತು ಮಾಡಿ ಜಿಲ್ಲಾ ಧಿಕಾರಿ ಕೆ. ಎಸ್.ಲತಾಕುಮಾರಿ ಅವರು ಆದೇಶಿಸಿದ್ದಾರೆ. ಜಾತ್ರಾ ಮಹೋತ್ಸವ ಹಿನ್ನಲೆಯಲ್ಲಿ ವಿವಿಧ ಇಲಾಖೆ ನೌಕರರನ್ನು ಕರ್ತವ್ಯಕ್ಕೆ ನಿಯೋಜಿಸಲಾಗಿದೆ. ಅದೇ ರೀತಿ ವಾರ್ಡನ್‌ಗಳು ಶುಕ್ರವಾರ ಸ್ವಚ್ಛತಾ ಮೇಲ್ವಿಚಾರಣೆಗೆ ನಿಯೋಜನೆಗೊಂಡಿದ್ದರು. ಆದರೆ, ಅವರ ಗುರುತಿನ ಚೀಟಿ ಹಾಕಿಕೊಂಡು ಅನ್ಯರು ದೇವಾಲಯ ಪ್ರವೇಶಿಸಿ ದ್ದರು. ಅದನ್ನು ಗಮನಿಸಿದ ಪೊಲೀಸರು ಜಿಲ್ಲಾಧಿಕಾರಿ ಗಮನಕ್ಕೆ ತಂದಿದ್ದರು.

ಇಬ್ಬರು ವಾರ್ಡನ್‌ಗಳು ದೇವಾಲಯದ ಒಳಗೆ ಇದ್ದು, ಅವರ ಗುರುತಿನ ಚೀಟಿಗಳು ಮಾತ್ರ ಬೇರೆಯವರ ಬಳಿ ಇದ್ದವು. ಲೋಪವನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾಧಿಕಾರಿ ತಕ್ಷಣವೇ ಅಮಾನತು ಆದೇಶ ಹೊರಡಿಸಿದ್ದಾರೆ.

# ವಾಯುಭಾರ ಕುಸಿತ: ಬಯಲು ಸೀಮೆಯಲ್ಲಿ ಭಾರೀ ಮಳೆ

## ಬಾಗೂರು ಹೋಬಳಿಯಲ್ಲಿ ವರುಣನ ಆರ್ಭಟ: ಹಾಸನಾಂಬ ದೇವಿ ದರ್ಶನಕ್ಕೂ ಅಡ್ಡಿ

• ಪ್ರಜೋದಯ ವರದಿ

**ಹಾಸನ:** ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತದಿಂದಾಗಿ ಬಯಲುಸೀಮೆ ಪ್ರದೇಶದಲ್ಲಿ ಧಾರಾಕಾರ ಮಳೆಯಾಗಿದೆ. ಚನ್ನರಾಯಪಟ್ಟಣ, ಅರಸೀಕೆರೆ, ಹೊಳೆನರಸೀಪುರ, ಹಾಸನ ತಾಲ್ಲೂಕು ವ್ಯಾಪ್ತಿಯಲ್ಲಿ ಗರಿಷ್ಠ ಮಳೆ ದಾಖಲಾಗಿದ್ದು, ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗಿದೆ.

ಗುರುವಾರ ರಾತ್ರಿಯಿಂದ ಹಾಸನ, ಹೊಳೆನರಸೀಪುರ, ಆಲೂರು, ಚನ್ನರಾಯಪಟ್ಟಣ, ಅರಸೀಕೆರೆ ಬೇಲೂರು, ಅರಕಲಗೂಡು, ಸಕಲೇಶಪುರ ಭಾಗದಲ್ಲಿ ಭರ್ಜರಿ ಮಳೆಯಾಗಿದೆ. ಶುಕ್ರವಾರವೂ ಹಲವೆಡೆ ಸಾಧಾರಣ ಮಳೆಯಾಗಿದ್ದು, ಅ.18ರ ವರೆಗೂ ಜಿಲ್ಲೆಯ ವಿವಿಧೆಡೆ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಮಲೆನಾಡಿಗಿಂತ ಬಯಲು ಸೀಮೆ ಭಾಗದಲ್ಲೇ ಹೆಚ್ಚಿನ ಪ್ರಮಾಣದ ಮಳೆಯಾಗಿದೆ. ಶುಕ್ರವಾರ ಬೆಳಿಗ್ಗೆ 8.30ಕ್ಕೆ ಕೊನೆಗೊಂಡಂತೆ ಚನ್ನರಾಯಪಟ್ಟಣದಲ್ಲಿ ಎರಡೂವರೆ ಇಂಚು, ಬಾಗೂರು ಹೋಬಳಿಯಲ್ಲಿ ಮೂರುಕಾಲು ಇಂಚು, ದಂಡಿಗನಹಳ್ಳಿ ಹೋಬಳಿಯಲ್ಲಿ 2 ಇಂಚು, ಹಿರೀಸಾವೆಯಲ್ಲಿ ಒಂದು ಮುಕ್ಕಾಲು ಇಂಚು, ನುಗ್ಗೇಹಳ್ಳಿಯಲ್ಲಿ 2 ಇಂಚು, ಶ್ರವಣಬೆಳಗೊಳದಲ್ಲಿ ಒಂದೂವರೆ ಇಂಚು, ಅರಸೀಕೆರೆ ನಗರದಲ್ಲಿ 1 ಇಂಚು, ಬಾಣಾವರ 1 ಇಂಚು, ಗಂಡಸಿ 2 ಇಂಚು, ಜಾವಗಲ್ ಒಂದು ಮುಕ್ಕಾಲು ಇಂಚು, ಕಣಕಟ್ಟೆ 1 ಇಂಚು ದಾಖಲೆಯ ಮಳೆಯಾಗಿದೆ.

ಆಲೂರು ಪಟ್ಟಣ, ಕೆಂಚಮ್ಮನ ಹೊಸಕೋಟೆ, ಕುಂದೂರು, ಪಾಳ್ಯ ಹೋಬಳಿ ವ್ಯಾಪ್ತಿಯಲ್ಲಿ ತಲಾ 1 ಇಂಚು ಮಳೆಯಾಗಿದೆ. ಅರಕಲಗೂಡು ಪಟ್ಟಣದಲ್ಲಿ ಒಂದೂವರೆ ಇಂಚು, ದೊಡ್ಡಮಗ್ಗೆ ಒಂದು ಮುಕ್ಕಾಲು ಇಂಚು, ಕೊಣನೂರು ಒಂದೂವರೆ ಇಂಚು, ಮಲ್ಲಿಪಟ್ಟಣ 1 ಇಂಚು, ರಾಮನಾಥಪುರ ಒಂದು ಮುಕ್ಕಾಲು ಇಂಚು, ಬೇಲೂರು ಪಟ್ಟಣ, ಅರೇಹಳ್ಳಿ, ಮಾದಿಹಳ್ಳಿಯಲ್ಲಿ ತಲಾ 1 ಇಂಚು, ಬಿಕ್ಕೋಡಿನಲ್ಲಿ ಒಂದೂವರೆ ಇಂಚು, ಹಳೇಬೀಡಿನಲ್ಲಿ ಒಂದು ಮುಕ್ಕಾಲು ಇಂಚು, ಸಕಲೇಶಪುರ ಪಟ್ಟಣದಲ್ಲಿ ಅರ್ಧ ಇಂಚು, ಬೆಳಗೋಡು 1 ಇಂಚು, ಹಾನುಬಾಳು ಮತ್ತು ಹೆತ್ತೂರು ಹೋಬಳಿಯಲ್ಲಿ ಅರ್ಧ ಇಂಚು, ಯಸಳೂರು ಹೋಬಳಿಯಲ್ಲಿ 1 ಇಂಚು ಮಳೆ ಸುರಿದಿದೆ. ಹೊಳೆನರಸೀಪುರ ಪಟ್ಟಣದಲ್ಲಿ 2 ಇಂಚು, ಹಳೇಕೋಟೆಯಲ್ಲಿ ಇಂದು ಮುಕ್ಕಾಲು ಇಂಚು, ಹಳ್ಳಿಮೈಸೂರು ಹೋಬಳಿಯಲ್ಲಿ 2 ಇಂಚು, ಹಾಸನ ನಗರದಲ್ಲಿ ಒಂದು ಕಾಲು ಇಂಚು, ಶಾಂತಿಗ್ರಾಮದಲ್ಲಿ ಒಂದು ಮುಕ್ಕಾಲು ಇಂಚು, ದುದ್ದ, ಕಟ್ಟಾಯ, ಸಾಲಗಾಮೆ ಹೋಬಳಿಯಲ್ಲಿ ತಲಾ ಒಂದೂವರೆ ಇಂಚು ಮಳೆಯಾಗಿದೆ.



**ಮಳೆಯಿಂದ ಪರಿತಪಿಸಿದ ಭಕ್ತರು**

ನಗರದಲ್ಲಿ ಗುರುವಾರ ಮಧ್ಯ ರಾತ್ರಿ ಆರಂಭವಾದ ಮಳೆ ಶುಕ್ರವಾರ ಬೆಳಿಗ್ಗೆ 8 ಗಂಟೆವರೆಗೂ ಸುರಿದಿದ್ದರಿಂದ ಹಾಸನಾಂಬ ದೇವಿ ದರ್ಶನಕ್ಕೆ ಬಂದಿದ್ದ ಸಾವಿರಾರು ಭಕ್ತರು ಪರಿತಪಿಸುವಂತಾಯಿತು.

ಮುಂಜಾನೆ ನಾಲ್ಕು ಗಂಟೆಗೆ ಸರದಿ ಸಾಲಿನಲ್ಲಿ ನಿಂತ ಭಕ್ತರು ಮಳೆಯಲ್ಲಿ ನೆನೆಯಬೇಕಾಯಿತು. ಜರ್ಮನ್ ಟೆಂಟ್ ಹಾಕಿದ್ದರಿಂದ ಮಳೆಯ ನಡುವೆಯೂ ಸಾವಿರಾರು ಭಕ್ತರು ದೇವಿಯ ದರ್ಶನ ಪಡೆದುಕೊಂಡರು. ಮಳೆಯ ಕಾರಣಕ್ಕಾಗಿಯೇ ಹಾಸನಾಂಬ ದೇವಿ ದರ್ಶನಕ್ಕೆ ಬರುವ ಭಕ್ತರ ಸಂಖ್ಯೆ ಕಡಿಮೆಯಾಗಿತ್ತು.ಭಾರೀ ಮಳೆಯಿಂದಾಗಿ ಹಾಸನಾಂಬ ಜಾತ್ರಾ ಮಹೋತ್ಸವದ ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಸಿಬ್ಬಂದಿಗೆ ತೊಂದರೆಯಾಗಿದೆ.

# ಶಿಷ್ಟಾಚಾರದ ಪ್ರಕಾರ ಎ.ಮಂಜು, ಸೂರಜ್ ದರ್ಶನ



• ಪ್ರಜೋದಯ ವರದಿ

**ಹಾಸನ:** ಜೆಡಿಎಸ್ ಶಾಸಕ ಎ.ಮಂಜು ಮತ್ತು ಕುಟುಂಬ ಹಾಗು ವಿಧಾನ ಪರಿಷತ್ ಸದಸ್ಯ ಡಾ.ಸೂರಜ್ ರೇವಣ್ಣ ಅವರು ಜಿಲ್ಲಾಡಳಿತ ಹೊಸದಾಗಿ ಜಾರಿ ಮಾಡಿರುವ ನಿಯಮಪಾಲಿಸಿ ಶಿಷ್ಟಾಚಾರ ವಾಹನದಲ್ಲಿ ಆಗಮಿಸಿ ಶುಕ್ರವಾರ ಹಾಸನಾಂಬ ದೇವಿ ದರ್ಶನ ಪಡೆದರು.

ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಎ. ಮಂಜು ಅವರು, ಈ ಬಾರಿ ಹಾಸನಾಂಬ ದೇವಿ ಆವರಣದಲ್ಲಿ ವಿಶೇಷ ವಾತಾವರಣ ಸೃಷ್ಟಿ ಮಾಡಿದ್ದಾರೆ. ಕುಟುಂಬ ಸಮೇತರಾಗಿ ದೇವಿ ದರ್ಶನ ಪಡೆದಿದ್ದೇನೆ. ಇದೇ ರೀತಿ ಕೊನೆಯವರೆಗೂ ನಡೆಯಬೇಕು.

ನಾನು ಮಂತ್ರಿ ಆಗಿದ್ದಾಗ ಕೆಲಸ ಮಾಡಿದ್ದೆ, ಈ ಬಾರಿ ವಿಭಿನ್ನವಾಗಿ ಮಾಡಿದ್ದಾರೆ, ಹಾಸನಾಂಬ ರಾಜ್ಯ, ದೇಶ ಜನರಿಗೆ ಒಳ್ಳೆಯದು ಮಾಡಲಿ. ದೇವರು ಅದೇ, ಭಕ್ತಿನೂ ಅದೇ, ಬರುವವರು ಅವರೇ, ಬರುವುದರಲ್ಲಿ ಬದ

» ನಾಲ್ಕನೇ ಪುಟದಲ್ಲಿ

# ಕೆಲವರ ಅನುಕೂಲಕ್ಕಾಗಿ ತೊಂದರೆಯಾಗಬಾರದು

## ಪಾಸ್ ರದ್ದು ಮಾಡಿರುವುದರಿಂದ ಸುಗಮ ದರ್ಶನ: ಕೃಷ್ಣಬೈರೇಗೌಡ

• ಪ್ರಜೋದಯ ವರದಿ

**ಹಾಸನ:** ವಿಐಪಿ, ವಿವಿಐಪಿ ಪಾಸ್ ರದ್ದು ಮಾಡಿರುವುದರಿಂದ ಜನರಿಗೆ ಅನುಕೂಲವಾಗಿದೆ. ಯಾರೋ ಕೆಲವರ ಅನುಕೂಲಕ್ಕೆ ಹೆಚ್ಚಿನ ಜನರಿಗೆ ಅನಾನುಕೂಲವಾಗಬಾರದೆಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಹೇಳಿದರು.

ಶುಕ್ರವಾರ ಬೆಳಿಗ್ಗೆ ಮಳೆಯ ನಡುವೆಯೂ ದರ್ಶನ ವ್ಯವಸ್ಥೆ ಪರಿಶೀಲನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾವು ಸಮಯ ನೀಡಿದ್ದೇವೆ, ಆ ಸಮಯದಲ್ಲಿ ಗಣ್ಯರು ಬರಬೇಕು ಅಷ್ಟೇ. ನಾವು ತೆಗೆದುಕೊಂಡ ತೀರ್ಮಾನಕ್ಕೆ ನಮ್ಮ ಜಿಲ್ಲೆಯ ಜನಪ್ರತಿನಿಧಿಗಳು ಒಪ್ಪಿಗೆ ಸೂಚಿಸಿದ್ದಾರೆ. ಜನ ಸಾಮಾನ್ಯರು ಚೆನ್ನಾಗಿ ದೇವಿಯ ದರ್ಶನ ಮಾಡಬಹುದೆಂದು ಹೇಳುತ್ತಿದ್ದಾರೆ. ಅದೇ ನಮಗೆ ಸಮಾಧಾನ. ಜನರು ಖುಷಿಯಾಗಿ ಹೋಗುತ್ತಿದ್ದಾರೆ ಎಂದರು.



ರಾಯಚೂರು, ಕೊಪ್ಪಳದಿಂದ ಬಂದಿರುವ ಭಕ್ತರನ್ನು ಮಾತನಾಡಿಸಿದೆ. ಕೆಲವರಿಗೆ ಒಂದು, ಒಂದೂವರೆ ಗಂಟೆಯಲ್ಲಿ ದರ್ಶನ ಆಗಿದೆ. ನಾಳೆಯಿಂದಲೂ ಹೀಗೆ ಇರುತ್ತೆ ಎಂದು ಹೇಳಲು ಆಗಲ್ಲ. ಇನ್ನೂ ಎರಡು ಮೂರು ದಿನ ನೋಡಬೇಕು. ಕೆಲವರು ಶಿಷ್ಟಾಚಾರ ವ್ಯವಸ್ಥೆ ಕಟ್ಟುನಿಟ್ಟಾಯಿತು ಎನ್ನುತ್ತಿದ್ದಾರೆ. ಎಲ್ಲರಿಗೂ ವಿನಾಯಿತಿ ಕೊಡಲು ಆಗೋದಿಲ್ಲ. ಒಬ್ಬರಿಗೆ ನೀಡಿದರೆ ಎಲ್ಲರಿಗೂ ನೀಡಬೇಕಾಗುತ್ತದೆ. ಈ ವಿಚಾರವಾಗಿ ನಾನು ಎಲ್ಲರಿಗೂ ಎಚ್ಚರಿಸಲು ಬಯಸುವೆ, ಜನಸಮುದಾಯ ಒಂದೆಡೆ ಸೇರಿದಾಗ ಏನೆಲ್ಲಾ ದುರ್ಘಟನೆ ನಡೆದಿವೆ ಎಂಬುದು ನಮ್ಮ

» ನಾಲ್ಕನೇ ಪುಟದಲ್ಲಿ



**ಬೆಂಗಳೂರು: ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರು ಶುಕ್ರವಾರ ಮಣಿಪಾಲ್ ಆಸ್ಪತ್ರೆಗೆ ಭೇಟಿ ನೀಡಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರ ಆರೋಗ್ಯ ವಿಚಾರಿಸಿ, ಹಾರೈಸಿದರು.**

# ಎತ್ತಿನಹೊಳೆ: 432 ಎಕರೆ ಅರಣ್ಯ ಬಳಕೆ ಮತ್ತೆ ಪ್ರಸ್ತಾವನೆ

## ತಾತ್ವಿಕ ಅನುಮೋದನೆ ನೀಡುವಂತೆ ಕೇಂದ್ರಕ್ಕೆ ರಾಜ್ಯ ಸರ್ಕಾರ ಕೋರಿಕೆ

• ಪ್ರಜೋದಯ ವರದಿ

**ನವದೆಹಲಿ:** ಬಯಲುಸೀಮೆ ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಸುವ ಎತ್ತಿನಹೊಳೆ ಯೋಜನೆಗೆ ಹಾಸನ ಹಾಗು ತುಮಕೂರು ಜಿಲ್ಲೆಗಳ 432 ಎಕರೆ ಅರಣ್ಯ ಬಳಕೆಗೆ ತಾತ್ವಿಕ ಅನುಮೋದನೆ ನೀಡುವಂತೆ ಕೋರಿ ಕರ್ನಾಟಕ ಸರ್ಕಾರವು ಕೇಂದ್ರ ಅರಣ್ಯ ಸಚಿವಾಲಯಕ್ಕೆ ಮತ್ತೆ ಪ್ರಸ್ತಾವ ಸಲ್ಲಿಸಿದೆ.

ಹಾಸನ, ತುಮಕೂರು ಜಿಲ್ಲೆಗಳಲ್ಲಿ ಗುರುತ್ವಾಕರ್ಷಣೆ ಕಾಲುವೆ ನಿರ್ಮಿಸಲು ತುಮಕೂರಿನ ಬೆಣ್ಣೆಹಳ್ಳದ ಕಾವಲ್, ಕಂಚಿಗಾನಹಳ್ಳಿ ಹಾಗು ಹಾಸನದ ಐದಹಳ್ಳಿ ಕಾವಲ್, ಕುಮರಿಹಳ್ಳಿ ಗ್ರಾಮದ ಅರಣ್ಯ ಭೂಮಿ ಬಳಸಲು ಒಪ್ಪಿಗೆ ಕೊಡಬೇಕೆಂದು ಅರಣ್ಯ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ (ಎಸಿಎಸ್) ಅವರು ಅರಣ್ಯ ಸಚಿವಾಲಯದ ಕಾರ್ಯದರ್ಶಿಗೆ ಪ್ರಸ್ತಾವನೆ ಸಲ್ಲಿಸಿಸಲಾಗಿದೆ.

432 ಎಕರೆ ಅರಣ್ಯ ಬಳಕೆಗೆ ಒಪ್ಪಿಗೆ ಕೋರಿ ರಾಜ್ಯ ಸರ್ಕಾರ ಈ ಹಿಂದೆ ಪ್ರಸ್ತಾವ ಸಲ್ಲಿಸಿತ್ತು. ಯೋಜನೆಯ ಅನುಷ್ಠಾನದ ಸಂದರ್ಭದಲ್ಲಿ ವ್ಯಾಪಕ ಪ್ರಮಾಣದಲ್ಲಿ ನಿಯಮ ಉಲ್ಲಂಘನೆ ಆಗಿದೆ ಎಂಬ ಕಾರಣ ನೀಡಿ ಕೇಂದ್ರ ಅರಣ್ಯ ಸಲಹಾ ಸಮಿತಿ ಅನುಮೋದನೆ ಕೊಟ್ಟಿರಲಿಲ್ಲ. ನಿಯಮ ಉಲ್ಲಂಘಿಸಿದ ಅಧಿಕಾರಿಗಳ


» ಮೂರನೇ ಪುಟದಲ್ಲಿ

# ಸನ್ಯಾಸಿ ಪ್ರಧಾನಿಯಾಗಲಿದ್ದಾರೆ: ಬ್ರಹ್ಮಾಂಡ ಗುರೂಜಿ

• ಪ್ರಜೋದಯ ವರದಿ

**ಹಾಸನ:** ಒಬ್ಬ ಸನ್ಯಾಸಿ ಪ್ರಧಾನಿ ಆಗಲಿದ್ದು, ದೇಶದ ಚುಕ್ಕಾಣಿ ಹಿಡಿಯುತ್ತಾರೆ. ಬ್ರಹ್ಮಚಾರಿ ಪ್ರಧಾನಿ ಆಗದಿದ್ದರೆ ಇಡೀ ಜಗತ್ತಿಗೆ ಶನಿ ಪ್ರವೇಶವಾಗುತ್ತದೆ ಎಂದು ಬ್ರಹ್ಮಾಂಡ ಗುರೂಜಿ ನರೇಂದ್ರ ಬಾಬು ಶರ್ಮ ಅವರು ಹೇಳಿದರು.

ಹಾಸನಾಂಬ ದೇವಿ ದರ್ಶನ ಪಡೆದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 75 ವರ್ಷ ತುಂಬಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ದೇವರು ಆರೋಗ್ಯ, ಐಶ್ವರ್ಯ ಕೊಟ್ಟು ಕಾಪಾಡಲಿ. ಮೋದಿ ಅವರು ದೇಶದ ರಕ್ಷಾ ಕವಚವಾಗಿದ್ದಾರೆ. ಸಿದ್ದರಾಮಯ್ಯ ಅವರು ಆರೋಗ್ಯ ಕ್ಷೀಣಿಸದಂತೆ ನೋಡಿಕೊಳ್ಳಬೇಕು. ಕಾಂಗ್ರೆಸ್ ಅಧಿಕಾರಾವಧಿ ಇದೇ ಕೊನೆ, ಮುಂದೆ ಅಧಿಕಾರಕ್ಕೆ ಬರುವುದಿಲ್ಲ, ಎಲ್ಲಾ ರಾಜಕೀಯದವರು ಗೊಂದಲದಲ್ಲಿ ಸಿಲುಕಲಿದ್ದು, ಬಹಳಷ್ಟು ಜನರು ಕಿತ್ತಾಡುತ್ತಾರೆ. ಸ್ಥಾನ ಪಲ್ಲಟ ಮಾಡಿ ಕೊಳ್ಳಲಿದ್ದಾರೆ. ಇಡೀ ಜಗತ್ತಿನ ಇತಿಹಾಸ ಪುಟದಲ್ಲಿ ಕರ್ನಾಟಕ ರಾಜ್ಯ ಕುರ್ಚಿಗಾಗಿ ಒಡೆದಾಡಿಕೊಳ್ಳುವುದರಲ್ಲಿ ಹೆಸರುವಾಸಿಯಾಗುತ್ತೆ. ಸಂಕ್ರಾಂತಿ ಒಳಗಡೆ ಕೇತು ಮತ್ತು ಸೂರ್ಯ ರಾಹು ಜೊತೆಗೆ ಜರುಗಲಿದ್ದು, ಬಹಳ ದೊಡ್ಡ ಗಲಾಟೆಗಳು ನಡೆಯುತ್ತವೆ. ಇದರ ಜೊತೆಗೆ ಸ್ಥಾನ ಪಲ್ಲಟ, ಪಕ್ಷಪಾತ, ಭೇದ ಭಾವ ಆಗಲಿದೆ ಎಂದರು.



ಇದು ಕೊನೆಯ ಹಂತ, ಮುಂದಿನ ದಿನಗಳಲ್ಲಿ ಪ್ರಳಯದ ಆಗುತ್ತೆ. ಉತ್ತರ ಭಾರತ, ಉತ್ತರ ಕರ್ನಾಟಕ ಭಾಗ ಮುಳುಗಡೆ ಆಗಲಿವೆ. ಕರ್ನಾಟಕ ಮೂರು ಭಾಗ, ಭಾರತ ದೇಶ ಎರಡು ಭಾಗ ಆಗುತ್ತದೆ.

» ನಾಲ್ಕನೇ ಪುಟದಲ್ಲಿ

**ಗಣ್ಯರಿಗೆ ಜಿಲ್ಲಾಡಳಿತ ಶಿಷ್ಟಾಚಾರದ ವ್ಯವಸ್ಥೆ | ಮೊದಲ ದಿನವೇ ಸಾವಿರಾರು ಸಂಖ್ಯೆಯಲ್ಲಿ ಜನರ ಆಗಮನ**

# ಪಾಸ್ ವ್ಯವಸ್ಥೆ ರದ್ದು : ಹಾಸನಾಂಬ ದರ್ಶನ ಭಕ್ತರಿಗೆ ಸುಗಮ

• ಪ್ರಜೋದಯ ವರದಿ

**ಹಾಸನ:** ಹಾಸನಾಂಬ ದರ್ಶನ ಶುಕ್ರವಾರದಿಂದ ಸಾರ್ವಜನಿಕರಿಗೆ ಮುಕ್ತವಾಗಿದೆ. ಮೊದಲ ದಿನವೇ ರಾಜ್ಯದ ಹೊರ ಜಿಲ್ಲೆಯಿಂದ ಬಂದ ಸಾವಿರಾರು ಸಂಖ್ಯೆಯ ಭಕ್ತರು ಮಳೆಯ ನಡುವೆಯೂ ಬೆಳಿಗ್ಗೆ ಆರು ಗಂಟೆಯಿಂದಲೇ ಸರತಿ ಸಾಲಿನಲ್ಲಿ ನಿಂತು ದರ್ಶನ ಪಡೆದರು.

ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ, ಸಂಸದ ಶ್ರೇಯಸ್ ಪಟೇಲ್ ಅವರು ಮಳೆಯ ನಡುವೆಯೂ ಬೆಳಿಗ್ಗೆ ಹಾಸನಾಂಬ ದೇವಾಲಯಕ್ಕೆ ಬಂದು ದೇವಾಲಯದೊಳಗೆ ಮತ್ತು ಹೊರಗೆ ಜಿಲ್ಲಾಡಳಿತ ಮಾಡಿರುವ ವ್ಯವಸ್ಥೆಯನ್ನು ಪರಿಶೀಲನೆ ನಡೆಸಿ, ಲೋಪವಾಗದಂತೆ ಎಚ್ಚರ ವಹಿಸುವಂತೆ ಅಧಿಕಾರಿಗಳಿಗೆ ಹಲವು ಸೂಚನೆ ನೀಡಿದರು.

ಮಾಜಿ ಸಚಿವ ಎ.ಮಂಜು, ವಿಧಾನ ಪರಿಷತ್ ಸದಸ್ಯ ಡಾ.ಸೂರಜ್ ರೇವಣ್ಣ, ಯಸಳೂರು ತೆಂಕಲಗೂಡು ಮಠದ ಶ್ರೀ ಚನ್ನಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ, ಬ್ರಹ್ಮಾಂಡ ಗುರೂಜಿ ಪ್ರಖ್ಯಾತಿಯ ನರೇಂದ್ರ ಬಾಬು ಶರ್ಮ ಅವರು ನಗರದ ಪ್ರವಾಸಿ ಮಂದಿರದ ಬಳಿಯೇ ತಮ್ಮ ಕಾರು ನಿಲ್ಲಿಸಿ ಅಲ್ಲಿಂದ ಜಿಲ್ಲಾಡಳಿತದ ಶಿಷ್ಟಾಚಾರ ವಾಹನದಲ್ಲಿ ಆಗಮಿಸಿ ದೇವಿ ದರ್ಶನ ಪಡೆದರು.



ಶುಕ್ರವಾರ ಬೆಳಿಗ್ಗೆ ಆರು ಗಂಟೆಯಿಂದ ಸಂಜೆ ಆರು ಗಂಟೆವರೆಗೆ ಮಾತ್ರ ಭಕ್ತರ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗಿತ್ತು. ಸಂಜೆ 7 ಗಂಟೆಯಿಂದ ಶನಿವಾರ ಬೆಳಿಗ್ಗೆ 5 ಗಂಟೆಯವರೆಗೆ ನೈವೇದ್ಯ, ವಿವಿಧ ಪೂಜಾ ಕಾರ್ಯ ನಡೆಸುವ ಸಲುವಾಗಿ ಸಾರ್ವಜನಿಕರಿಗೆ ದರ್ಶನ ವ್ಯವಸ್ಥೆ ಬಂದ್ ಮಾಡಲಾಯಿತ್ತು. ಶನಿವಾರ ಬೆಳಿಗ್ಗೆ 5 ಗಂಟೆಯಿಂದ ಅ.22ರ ವರೆಗೆ ನೈವೇದ್ಯ ಸಮಯ ಹೊರತುಪಡಿಸಿ ದಿನದ 24 ಗಂಟೆಗೂ ದೇವಿಯ ದರ್ಶನ ಭಾಗ್ಯ ಲಭಿಸಲಿದೆ.

ಈ ಬಾರಿ ಜಿಲ್ಲಾಡಳಿತ ದರ್ಶನದ ವ್ಯವಸ್ಥೆಯಲ್ಲಿ ಹಲವು ಬದಲಾವಣೆಗಳನ್ನು ಮಾಡಿದೆ. ಹಲವು ವರ್ಷಗಳಿಂದ ಜಾರಿಯಲ್ಲಿದ್ದ ವಿಐಪಿ ಮತ್ತು ವಿವಿಐಪಿ ಪಾಸ್ ವ್ಯವಸ್ಥೆಯನ್ನು ಸಂಪೂರ್ಣವಾಗಿ ರದ್ದುಪಡಿಸಲಾಗಿದೆ. ಹೊಸ ವ್ಯವಸ್ಥೆಯಂತೆ, ಈ ವರ್ಷದಿಂದ ಮಾಜಿ ಶಾಸಕರು, ಅಧಿಕಾರಿಗಳು ಹಾಗು ಇತರೆ ಗಣ್ಯರಿಗೆ ಮಾತ್ರ ಗೋಲ್ಡ್ ಪಾಸ್ ವಿತರಿಸಲು ಜಿಲ್ಲಾಡಳಿತ ಮುಂದಾಗಿದೆ. ವಿಐಪಿ, ವಿವಿ ಐಪಿ ಪಾಸ್‌ಗಳನ್ನು ರದ್ದು ಮಾಡಿರುವುದ ರಿಂದ ದೂರದ ಊರುಗಳಿಂದ ಬರುತ್ತಿರುವ ಭಕ್ತರಿಗೆ ಶೀಘ್ರ ದೇವಿ ದರ್ಶನ ಸಿಗುತ್ತಿರುವುದ ರಿಂದ ಸಂತಸ ವ್ಯಕ್ತಪಡಿಸುತ್ತಿದ್ದಾರೆ.



ಮಧ್ಯಾಹ್ನದವರೆಗೆ ಧರ್ಮ ದರ್ಶನ ಸಾಲಿನಲ್ಲಿ ನಿಂತವರು 3 ರಿಂದ 4 ಗಂಟೆಗಳ ಕಾಲ ಸಾಲಿನಲ್ಲಿ ನಿಂತು ದರ್ಶನ ಪಡೆದರೆ, 300ರೂ. ಟಿಕೆಟ್ ಪಡೆದವರು 2 ಗಂಟೆಗಳ ಕಾಲ ಸಾಲಿ ನಲ್ಲಿ ನಿಲ್ಲಬೇಕಾಯಿತು. ಆದರೆ, ಮಧ್ಯಾಹ್ನದ ನಂತರ ಭಕ್ತರ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಿದ್ದರಿಂದ ಅರ್ಧ ಗಂಟೆಯಲ್ಲೇ ಧರ್ಮ ದರ್ಶನ ಸಾಲಿನಲ್ಲಿ ನಿಂತಿದ್ದ ಭಕ್ತರು ದೇವಿಯ ದರ್ಶನ ಪಡೆದುಕೊಂಡರು. ಶನಿವಾರ, ಭಾನುವಾರ ರಜೆ ದಿನ ಆಗಿರುವುದರಿಂದ ಈ ಎರಡು ದಿನ ಗಳಲ್ಲಿ ಭಕ್ತರ ಸಂಖ್ಯೆ ದುಪ್ಪಟ್ಟಾಗುವ ನಿರೀಕ್ಷೆ ಇದೆ.

**ಇಂದಿನ ದರ್ಶನ ಸಮಯ**

ಶನಿವಾರ ಬೆಳಿಗ್ಗೆ 5 ಗಂಟೆಯಿಂದ ಮಧ್ಯಾಹ್ನ 2 ವರೆಗೆ (ಮಧ್ಯಾಹ್ನ 2 ರಿಂದ 3.30 ನೈವೇದ್ಯ ಸಮಯ) ಮಧ್ಯಾಹ್ನ 3.30 ರಿಂದ ಭಾನುವಾರ ಬೆಳಗಿನ ಜಾವ 3 ಗಂಟೆವರೆಗೆ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಗೋಲ್ಡ್ ಪಾಸ್‌ಗೆ ಬೆಳಿಗ್ಗೆ 8 ಗಂಟೆಯಿಂದ 10 ಗಂಟೆವರೆಗೆ ಅವಕಾಶ ನೀಡಲಾಗಿದೆ. ಶಿಷ್ಟಾಚಾರಕ್ಕೆ ಒಳಪಡುವ ಗಣ್ಯರಿಗೆ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ರವರೆಗೆ ಮಾತ್ರ ದರ್ಶನಕ್ಕೆ ಅವಕಾಶ ನೀಡಲಾಗಿದೆ. ನಂತರ ಬಂದ ಅತಿ ಗಣ್ಯರ ಶಿಷ್ಟಾಚಾರಕ್ಕೆ ನಿರ್ಬಂಧ ವಿಧಿಸಲಾಗಿದೆ. ಇನ್ನು ದೇವಾಲಯದ ಆವರಣಕ್ಕೆ ಗಣ್ಯರ ಖಾಸಗಿ ವಾಹನ ಬರುವಂತಿಲ್ಲ, ಬದಲಾಗಿ ಪ್ರವಾಸಿ ಮಂದಿರದಿಂದ ಜಿಲ್ಲಾಡಳಿತ ಸಿದ್ಧಪಡಿಸಿರುವ ಶಿಷ್ಟಾಚಾರದ ವಾಹನದಲ್ಲೇ ಬಂದು ಹೋಗಬೇಕಿದೆ. ಎಸ್ಕಾರ್ಟ್, ಪೈಲೆಟ್‌ಗಳಿಗೂ ನಿರ್ಬಂಧ ಹೇರಲಾಗಿದೆ.

# ಪ್ರತಿಯೊಬ್ಬರಿಗೂ ಮಾನಸಿಕ ಆರೋಗ್ಯ ಬಹಳ ಅವಶ್ಯಕ

• ಪ್ರಜೋದಯ ವರದಿ

**ಹಾಸನ:** ದೈಹಿಕ ಆರೋಗ್ಯದಷ್ಟೆ ಮಾನಸಿಕ ಆರೋಗ್ಯವು ಪ್ರತಿಯೊಬ್ಬರಿಗೂ ಬಹಳ ಅವಶ್ಯಕವಾಗಿದ್ದು, ನಿಮ್ಮ ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಹೆಚ್ಚು ಗಮನವಹಿಸಬೇಕು ಎಂದು 1ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಮಾನಸಿಕ ಆರೋಗ್ಯ ವಿಮರ್ಶನಾ ಮಂಡಳಿಯ ಅಧ್ಯಕ್ಷರಾದ ಬಿ.ಎಂ.ಶೈಲ ಅವರು ತಿಳಿಸಿದ್ದಾರೆ.

ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆಯಲ್ಲಿ ಮಾತನಾಡಿದ ಅವರು, ದೇಹದ ಮಾನಸಿಕ ಮತ್ತು ದೈಹಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ದಿನನಿತ್ಯ ಯೋಗ, ಪ್ರಾಣಯಾಮ, ಧ್ಯಾನವನ್ನು ಮಾಡಬೇಕು ಎಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸದಸ್ಯ ಕಾರ್ಯದರ್ಶಿ ದಾಕ್ಷಾಯಿಣಿ ಅವರು



**ಮಾನಸಿಕ ಆರೋಗ್ಯ ವಿಮರ್ಶನಾ ಮಂಡಳಿ ಕಚೇರಿ ಉದ್ಘಾಟನೆ**

**ಹಿಮ್ಸ್ ಭೋದಕ ಆಸ್ಪತ್ರೆಯ ಮನೋವೈದ್ಯಕೀಯ ವಿಭಾಗದಲ್ಲಿ ನೂತನವಾಗಿ ಆರಂಭಗೊಂಡಿರುವ Mental Health Review Board Office (MHRB) ಮಾನಸಿಕ ಆರೋಗ್ಯ ವಿಮರ್ಶನಾ ಮಂಡಳಿಯ ಕಚೇರಿಯನ್ನು 1ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಮಾನಸಿಕ ಆರೋಗ್ಯ ವಿಮರ್ಶನಾ ಮಂಡಳಿಯ ಅಧ್ಯಕ್ಷರಾದ ಶೈಲ ಅವರು ಉದ್ಘಾಟಿಸಿದರು.**

ಮಾತನಾಡಿ, ಮಾನಸಿಕ ಅಸ್ವಸ್ಥರಿಗೆ ಆರೈಕೆದಾರರು ಯಾರೂ ಇಲ್ಲದಂತಹ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಾಮನಿರ್ದೇಶಿತ ಆರೈಕೆದಾರರು ಸದರಿ ಅಸ್ವಸ್ಥರನ್ನು ಆರೈಕೆ ಮಾಡಬೇಕಾಗಿರುತ್ತದೆ ಎಂದು ತಿಳಿಸಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ|| ನಾಗೇಶ್ ಪಿ. ಆರಾಧ್ಯ ಅವರು ಮಾತನಾಡಿ, ಮಾನಸಿಕ ಖಾಯಿಲೆಗಳು ಯಾರಿಗೆ ಬೇಕಾದರು ಬರಬಹುದು, ಬಂದಂತಹ ಸಂದರ್ಭದಲ್ಲಿ ತಮ್ಮ ಸಮಸ್ಯೆಗಳ ಬಗ್ಗೆ ಮುಕ್ತವಾಗಿ ಮಾತನಾಡಬೇಕು ಅಥವಾ ಉಚಿತ ಮಾನಸಿಕ ಆರೋಗ್ಯ ಸಹಾಯವಾಣಿ ಟೆಲಿಮನಸ್ 14416 ಕ್ಕೆ ಕರೆ ಮಾಡಿ ಮಾತನಾಡಬಹುದು ಎಂದು ತಿಳಿಸಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ|| ನಾಗಪ್ಪ ಜಿ.ಎಸ್ ಅವರು ಮಾತನಾಡಿ, ನೈಸರ್ಗಿಕ ವಿಕೋಪಗಳು ಹಾಗೂ ತುರ್ತು ಪರಿಸ್ಥಿತಿಗಳ ಸಂದರ್ಭಗಳಲ್ಲಿ ತೊಂದರೆಗೊಳಗಾದವರಿಗೆ ಮಾನಸಿಕ ಬೆಂಬಲ ಅತ್ಯವಶ್ಯಕವಾಗಿರುತ್ತದೆ ಎಂದು ತಿಳಿಸಿದರು.

ಹಿಮ್ಸ್‌ನ ಪ್ರಾಂಶುಪಾಲ ಡಾ||ರವಿಕುಮಾರ್ ಬಿ.ಸಿ, ಅವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮಾನಸಿಕ ಆರೋಗ್ಯ ಸಮಸ್ಯೆಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಇದರಲ್ಲಿ ಕೇವಲ ಶೇ.30 ರಷ್ಟು ಜನರು ಚಿಕಿತ್ಸೆಯನ್ನು ಪಡೆಯುತ್ತಿದ್ದು ಉಳಿದವರು ಇದನ್ನು ಕಡೆಗಣಿಸುತ್ತಿದ್ದಾರೆ ಹಾಗಾಗಿ ಜನರಿಗೆ ಇದರ ಬಗ್ಗೆ ಸಾಕಷ್ಟು ಅರಿವು ಮೂಡಿಸುವ ಅವಶ್ಯಕತೆ ಇದೆ ಎಂದು ತಿಳಿಸಿದರು.

ಹಾಸನ ಮನೋ ವೈದ್ಯಕೀಯ ವಿಭಾಗದ ಮನೋರೋಗ್ಯ ತಜ್ಞ ಡಾ||ಸಂತೋಷ್ ಮಾತನಾಡಿ, ಸಾರ್ವಜನಿಕರು ಕೇವಲ ದೈಹಿಕ ಖಾಯಿಲೆಗಳ ಬಗ್ಗೆ ಗಮನ ನೀಡುತ್ತಾರೆ. ಅವರ ಮನಸ್ಸಿಗೆ ಸಂಬಂಧಿಸಿದ ಸಾಮಾನ್ಯ ಮಾನಸಿಕ ಖಾಯಿಲೆಗಳಾದ ಖಿನ್ನತೆ, ಆತಂಕ, ಗೀಳು ಖಾಯಿಲೆಗಳು ಇವುಗಳ ಬಗ್ಗೆ ಗಮನ ನೀಡುವುದಿಲ್ಲ ತದನಂತರದಲ್ಲಿ ಇದು ಉಲ್ಬಣಗೊಂಡು ತೀವ್ರತರಹದ ಮಾನಸಿಕ ಖಾಯಿಲೆಗಳಾದ ಸ್ಕೀಜೋಫ್ರೇನಿಯಾ, ಅತಿಯಾದ ಸಂತೋಷ, ಅತಿಯಾದ ಸಂಶಯ, ವಿಚಿತ್ರವಾಗಿ ವರ್ತಿಸುವುದು ಹಾಗೂ ಉನ್ಮಾದಕ್ಕೆ (ಮೇನಿಯಾ) ಒಳಗಾಗುತ್ತಾರೆ, ಈ ಎಲ್ಲಾ ಖಾಯಿಲೆಗಳಿಗೂ ಉಚಿತ ಚಿಕಿತ್ಸೆ ಲಭ್ಯವಿದ್ದು, ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ಅವರು ತಿಳಿಸಿದರು.

# ಆರ್.ಎಸ್.ಎಸ್.ನಿಂದ ಬೃಹತ್ ಪಥ ಸಂಚಲನ



• ಪ್ರಜೋದಯ ವರದಿ

**ಸಕಲೇಶಪುರ:** ಪಟ್ಟಣದ ಪ್ರಮುಖ ಬೀದಿಗಳಲ್ಲಿ ಶುಕ್ರವಾರ ರಾಷ್ಟ್ರೀಯ ಸ್ವಯಂ ಸೇವಾ ಸಂಘದವರಿಂದ ಬೃಹತ್ ಪಥ ಸಂಚಲನ ನಡೆಸಲಾಯಿತು.

ಇಡೀ ವಿಶ್ವದ ಶಾಂತಿ ಮತ್ತು ಸಮೃದ್ಧಿಗಾಗಿ ಸಮರಸ ಹಾಗೂ ಸಂಘಟಿತ ಹಿಂದೂ ಸಮಾಜ ನಿರ್ಮಾಣದ ಗುರಿಯೊಂದಿಗೆ ಸಂಘದ ಶತಾಬ್ದಿ ಸಂಕಲ್ಪದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಪಥಸಂಚಾಲನೆ ಪಟ್ಟಣದಲ್ಲಿರುವ ಸಕಲೇಶ್ವರಸ್ವಾಮಿ ದೇವಾಲಯದಿಂದ ಒಂದು ತಂಡ ಆರಂಭಿಸಿದರೆ, ಮತ್ತೊಂದು ತಂಡ ಲಯನ್ಸ್ ಕ್ಲಬ್‌ನಿಂದ ಪಥ ಸಂಚಲನ ಆರಂಭಿಸಿತು.

ಎರಡೂ ತಂಡಗಳು ಏಕಕಾಲದಲ್ಲಿ ಹಳೆ ಬಸ್ ನಿಲ್ದಾಣದ ಸಮೀಪ ವಿಲೀನಗೊಂಡು, ಮುಖ್ಯ ರಸ್ತೆಯಲ್ಲಿ ಪಥ ಸಂಚಲನ ನಡೆಸಿ ಶ್ರೀನಿವಾಸ್ ಕಲ್ಯಾಣ ಮಂಟಪದವರೆಗೆ ಮುಂದುವರಿಸಿದರು.

ಕಲ್ಯಾಣ ಮಂಟಪದ ಆವರಣದಲ್ಲಿ ಸ್ವಯಂ ಸೇವಕರಿಗೆ ಕುಟುಂಬ, ಪರಿಸರ ಹಾಗೂ ತಮ್ಮ ಸಂಸ್ಕೃತಿಯನ್ನು ಉಳಿಸಿ ಬೆಳಸುವ ಕುರಿತು ಮಾರ್ಗದರ್ಶನ ನೀಡಲಾಯಿತು.

## ಎತ್ತಿನಹೊಳೆ: 432 ಎಕರೆ ಅರಣ್ಯ ಬಳಕೆ ಮತ್ತೆ ಪ್ರಸ್ತಾವನೆ

» ಮೊದಲನೇ ಪುಟದಿಂದ

ವಿರುದ್ಧ ಶಿಸ್ತುಕ್ರಮ ಕೈಗೊಳ್ಳಬೇಕು ಹಾಗೂ ದಂಡ ವಿಧಿಸಬೇಕು ಎಂದು ತಾಕೀತು ಮಾಡಿತ್ತು. ಇದರಿಂದಾಗಿ, ಎತ್ತಿನಹೊಳೆ ಕಾಮಗಾರಿ ಸ್ಥಗಿತವಾಗಿತ್ತು.

ಆ ಬಳಿಕ ಹಾಸನ ಹಾಗು ತುಮಕೂರು ಜಿಲ್ಲೆಗಳ ಡಿಸಿಎಫ್‌ಗಳು ಸೆಪ್ಟೆಂಬರ್‌ನಲ್ಲಿ ಯೋಜನಾ ಸ್ಥಳ ಪರಿಶೀಲನೆ ನಡೆಸಿ ವರದಿ ಸಲ್ಲಿಸಿದ್ದರು. ನಿಯಮ ಉಲ್ಲಂಘಿಸಿದವರ ವಿರುದ್ಧ 2019ರಲ್ಲೇ ಎಫ್‌ಐಆರ್ ದಾಖಲಿಸಲಾಗಿದೆ. ಬಯಲುಸೀಮೆ ಜಿಲ್ಲೆಗಳ ನೀರಿನ ದಾಹ ಇಂಗಿಸಲು ಈ ಯೋಜನೆ ಅಗತ್ಯ ಎಂದು ಶಿಫಾರಸು ಮಾಡಿದ್ದರು. ತುಮಕೂರು ಜಿಲ್ಲೆಯ ಮಾರಶೆಟ್ಟಿಹಳ್ಳಿ ಮೀಸಲು ಅರಣ್ಯದಲ್ಲಿ ಕಾಲುವೆ ನಿರ್ಮಿಸಲಾಗುತ್ತಿದೆ. ಇದರಿಂದ ಕಾಡಿಗೆ ಭಾರೀ ಹಾನಿಯಾಗುತ್ತದೆ. ಇದನ್ನು ತಪ್ಪಿಸಲು ನೆಲದಡಿ ಕಾಲುವೆ ನಿರ್ಮಿಸಬೇಕು ಎಂದು ಸಲಹಾ ಸಮಿತಿ ಸೂಚಿಸಿತ್ತು.

ಕಾಲುವೆ ನಿರ್ಮಾಣಕ್ಕಾಗಿ 7,500 ಮರಗಳನ್ನು ಕಡಿಯಲು ಉದ್ದೇಶಿಸಲಾಗಿತ್ತು. ಇದೀಗ, ಈ ಭಾಗದಲ್ಲಿ ಕಾಲುವೆಯ ವಿನ್ಯಾಸ ಬದಲಿಸಲಾಗಿದೆ. 4,043 ಮರಗಳನ್ನಷ್ಟೇ ಕಡಿಯಲಾಗುತ್ತದೆ ಎಂದು ತುಮಕೂರು ಡಿಸಿಎಫ್ ತಮ್ಮ ವರದಿಯಲ್ಲಿ ತಿಳಿಸಿದ್ದರು. ಈ ಅರಣ್ಯದಲ್ಲಿ ಭೂಗತ ಕಾಲುವೆ ನಿರ್ಮಾಣ ಕಾರ್ಯ ಸಾಧುವಲ್ಲ. ಇದರಿಂದಾಗಿ, ಭೂಕುಸಿತದಂತಹ ಸಮಸ್ಯೆಗಳು ಸೃಷ್ಟಿಯಾಗಬಹುದು. ವಿನ್ಯಾಸ ಬದಲಿಸಿದ್ದರಿಂದ ರಾಜ್ಯ ಸರ್ಕಾರಕ್ಕೆ 170 ಕೋಟಿ ಹೆಚ್ಚುವರಿ ಹೊರೆ ಆಗಲಿದೆ ಎಂದು ಜಲಸಂಪನ್ಮೂಲ ಇಲಾಖೆಯ ಅಧಿಕಾರಿಗಳು ಪ್ರತಿಕ್ರಿಯಿಸಿದ್ದಾರೆ.

# ಹಂತ ಹಂತವಾಗಿ ರಸ್ತೆಗಳ ಅಭಿವೃದ್ಧಿಗೆ ಆದ್ಯತೆ: ಶಾಸಕ ಸಿಮೆಂಟ್ ಮಂಜು

• ಪ್ರಜೋದಯ ವರದಿ

**ಸಕಲೇಶಪುರ:** ಹಾನುಬಾಳ್ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಹಂತ ಹಂತವಾಗಿ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲ್ಲೂಕಿನ ಹಾನುಬಾಳ್ ಗ್ರಾಮ ಪಂಚಾಯತಿ ವ್ಯಾಪ್ತಿಯ ಅಗ್ನಿ ಗ್ರಾಮದಲ್ಲಿ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಮಲೆನಾಡು ಭಾಗದಲ್ಲಿ ಹರಿಯುವ ನೀರನ್ನು ಬಯಲುಸೀಮೆ ಪ್ರದೇಶಗಳಿಗೆ ಹರಿಸಲಾಗುತ್ತಿದೆ. ಆದರೆ ಇಲ್ಲಿನ ಜನತೆ ನೀರನ್ನು ನೀಡಿದರೂ ಅಗತ್ಯ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಎತ್ತಿನಹೊಳೆ ಯೋಜನೆ ಉದ್ಘಾಟನೆಗೆ ಬಂದಾಗ, ಎತ್ತಿನಹೊಳೆ ವ್ಯಾಪ್ತಿಯ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹಣ ನೀಡದಿದ್ದರೆ ನೀರು ಹರಿಯಲು ಬಿಡುವುದಿಲ್ಲ ಎಂದು ನಾನು ಹೇಳಿದ್ದೆ. ಇದಕ್ಕೆ ಸ್ಪಂದಿಸಿರುವ ಡಿ.ಕೆ.ಶಿವಕುಮಾರ್ ಅವರು 82 ಕೋಟಿ ರೂ.ಗಳನ್ನು ಎತ್ತಿನಹೊಳೆ ಯೋಜನೆಗೆ ಬಿಡುಗಡೆ ಮಾಡಿದ್ದಾರೆ. ಇವರಿಗೆ ನಾನು ವಿಶೇಷ ಅಭಿನಂದನೆ ಸಲ್ಲಿಸುತ್ತೇನೆ ಎಂದರು.



ಚುನಾವಣೆಯ ಮೊದಲು ಅಗ್ನಿ ಗ್ರಾಮಕ್ಕೆ ಭೇಟಿ ನೀಡಿದಾಗ ಇಲ್ಲಿ ರಸ್ತೆ ನಿರ್ಮಾಣದ ಭರವಸೆ ನೀಡಿದ್ದೆ. ಅದರಂತೆ ಇಂದು ಹಾನುಬಾಳ್ ಮುಖ್ಯರಸ್ತೆಯಿಂದ ಅಗ್ನಿ ಗ್ರಾಮದವರೆಗೆ ಸುಮಾರು 1 ಕಿ.ಮೀ. ಉದ್ದದ ಡಾಂಬರ್ ರಸ್ತೆ ಮತ್ತು 350 ಮೀಟರ್ ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸುತ್ತಿದ್ದೇನೆ. ಈ ಕಾಮಗಾರಿ ಸುಮಾರು 1 ಕೋಟಿ 70 ಲಕ್ಷ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ. ಜನರು ಕುಡಿಯುವ ನೀರು, ರಸ್ತೆ, ಬೀದಿ ದೀಪಗಳನ್ನು ಬಯಸುತ್ತಾರೆ. ಇದನ್ನೆಲ್ಲ ನೀಡಲು ನಾನು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ. ಮುಂದಿನ ದಿನಗಳಲ್ಲಿ ಹಾನುಬಾಳ್ ಹೋಬಳಿಯಲ್ಲಿ ಮತ್ತಷ್ಟು ರಸ್ತೆಗಳನ್ನು ಅಭಿವೃದ್ಧಿಪಡಿಸುತ್ತೇನೆ ಎಂದು ಹೇಳಿದರು.

ಮಾಜಿ ತಾಲೂಕು ಕಾಂಗ್ರೆಸ್ ಅಧ್ಯಕ್ಷ ಹಾನುಬಾಳ್ ಭಾಸ್ಕರ್ ಅವರು ಮಾತನಾಡಿ, ನಾನು ಇದೇ ಗ್ರಾಮದಲ್ಲಿ ಹಲವಾರು ವರ್ಷಗಳ ಹಿಂದೆ ವಾಸವಿದ್ದು, ಇಲ್ಲಿನ ಹದಗೆಟ್ಟ ರಸ್ತೆ ಮತ್ತು ಅತಿಯಾದ ಮಳೆಯಿಂದಾಗಿ ಗ್ರಾಮವನ್ನು ತೊರೆದಿದ್ದೆ. ನಾನು ಸಹ ಸರ್ಕಾರಕ್ಕೆ ಇಲ್ಲಿ ರಸ್ತೆ ನಿರ್ಮಾಣ ಮಾಡಲು ಮನವಿ ಸಲ್ಲಿಸಿದ್ದೆ. ಹಲವು ದಶಕಗಳ ನಂತರ ಶಾಸಕರ ಮುತುವರ್ಜಿಯಿಂದ ಇಲ್ಲಿ ರಸ್ತೆ ನಿರ್ಮಾಣ ಆಗುತ್ತಿದೆ. ರಸ್ತೆ, ಆರೋಗ್ಯ, ವಿದ್ಯೆಯು ಜನರು ಬಯಸುವ ಮೂಲ ಅಗತ್ಯಗಳಾಗಿವೆ. ಶಾಸಕರು ಎತ್ತಿನಹೊಳೆ ಯೋಜನೆ ಮೂಲಕ 82 ಕೋಟಿ ರೂ.ಗಳ ಅನುದಾನವನ್ನು ಮಾತ್ರವಲ್ಲದೆ, ಈ ಭಾಗದಲ್ಲಿ ರಸ್ತೆ ನಿರ್ಮಾಣಕ್ಕೂ ಸಹ ಅನುದಾನ ತಂದಿರುವುದು ಸಂತೋಷದ ವಿಷಯ. ನಾನು ಪಕ್ಷಭೇದ ಮರೆತು ಅವರನ್ನು ಅಭಿನಂದಿಸುತ್ತೇನೆ ಎಂದು ಮೆಚ್ಚುಗೆ ಸೂಚಿಸಿದರು.

ಬಿಜೆಪಿ ಮುಖಂಡ ಕ್ಯಾಮನಹಳ್ಳಿ ರಾಜ್‌ಕುಮಾರ್, ಹಾನುಬಾಳ್ ಗ್ರಾಪಂ ಅಧ್ಯಕ್ಷ ಸಂತೋಷ್, ಬಿಜೆಪಿ ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಅಗ್ನಿ ಸೋಮಶೇಖರ್, ಮುಖಂಡರಾದ ರಂಗನಾಥ್, ಅಗಲಟ್ಟಿ ಚಂದ್ರಣ್ಣ, ಅಪ್ಪಣ್ಣ, ಉದ್ಯಮಿ ಸತೀಶ್, ಬಿಜೆಪಿ ಹಿರಿಯ ಮುಖಂಡ ಸುಬ್ಬೇ ಗೌಡ, ಪಿಡಿಓ ಹರೀಶ್, ಲೋಕೋಪಯೋಗಿ ಇಲಾಖೆಯ ಅಭಿಯಂತರ ರಜಾಕ್ ಹಾಗೂ ಇನ್ನಿತರರು ಹಾಜರಿದ್ದರು.

## ಹೊಸ ದಾಖಲೆ ಬರೆದ ಆಟಗಾರ್ತಿ ರಿಚಾ ಘೋಷ್!



ದಕ್ಷಿಣ ಆಫ್ರಿಕಾ ವಿರುದ್ಧದ ಮಹಿಳಾ ಏಕದಿನ ವಿಶ್ವಕಪ್ ಪಂದ್ಯದಲ್ಲಿ 77 ಎಸೆತಗಳಲ್ಲಿ 94 ರನ್ ಗಳಿಸುವ ಮೂಲಕ ರಿಚಾ ಘೋಷ್ ಇತಿಹಾಸ ಬರೆದರು. ಅದ್ಭುತ ಫಾರ್ಮ್‌ನಲ್ಲಿ ಕಾಣಿಸಿಕೊಂಡ ರಿಚಾ, ಭರ್ಜರಿ ಬ್ಯಾಟಿಂಗ್ ಮಾಡುವ ಮೂಲಕ ತಂಡಕ್ಕೆ ನೆರವಾದರು.

ಇದು ಪುರುಷರು ಮತ್ತು ಮಹಿಳೆಯರಿಬ್ಬರಲ್ಲಿ ಏಕದಿನ ವಿಶ್ವಕಪ್ ಪಂದ್ಯದಲ್ಲಿ 8ನೇ ಕ್ರಮಾಂಕ ಅಥವಾ ಅದಕ್ಕಿಂತ ಕಡಿಮೆ ಕ್ರಮಾಂಕದಲ್ಲಿ ಬ್ಯಾಟರ್ ಒಬ್ಬರು ಗಳಿಸಿದ ಅತ್ಯಧಿಕ ರನ್ ಆಗಿದೆ.

# ಪುಷ್ಪಗಿರಿ ಕ್ಷೇತ್ರದ ಅಭಿವೃದ್ಧಿಗೆ ಸದಾ ಸಿದ್ಧ: ಹೆಚ್.ಕೆ.ಸುರೇಶ್

• ಪ್ರಜೋದಯ ವರದಿ

**ಹಳೇಬೀಡು:** ಅಸಂಖ್ಯಾತ ಭಕ್ತರನ್ನು ಹೊಂದಿರುವ ಪುಷ್ಪಗಿರಿ ಕ್ಷೇತ್ರದ ಅಭಿವೃದ್ಧಿಗೆ ನಾವು ಕೈಜೋಡಿಸಿದ್ದೇವೆ ಮತ್ತು ಸದಾ ಸಿದ್ದರಾಗಿದ್ದೇವೆ. ಪುಷ್ಪಗಿರಿ ಬೆಟ್ಟದಲ್ಲಿ 5 ಲಕ್ಷ ರೂ. ವೆಚ್ಚದ ಕುಡಿಯುವ ನೀರಿನ ಯೋಜನೆ ಕೈಗೊಳ್ಳಲು ಹಣ ಮಂಜೂರು ಮಾಡಿಸಲಾಗಿದೆ ಎಂದು ಶಾಸಕ ಹೆಚ್.ಕೆ.ಸುರೇಶ್ ಹೇಳಿದರು.

ಪುಷ್ಪಗಿರಿಯಲ್ಲಿ ನಡೆದ ಮಲ್ಲಿಕಾರ್ಜುನ ಸ್ವಾಮಿ ಹಾಗೂ ಪಾರ್ವತಮ್ಮ ದೇವಾಲಯದ ದಾಸೋಹ ಭವನ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿ, ಒಗ್ಗಟ್ಟಿನಲ್ಲಿ ಬಲವಿದೆ ಎಂಬ ಮಾತಿನಂತೆ ಪುಷ್ಪಗಿರಿ ದೇವಾಲಯದ ಭಕ್ತರು ಹಾಗೂ ಮಠದವರು ಕ್ಷೇತ್ರದ ಪ್ರಗತಿಯತ್ತ ಹೆಜ್ಜೆ ಇಡಬೇಕು. ಪುಷ್ಪಗಿರಿ ಕ್ಷೇತ್ರ ಹೊಯ್ಸಳರ ಇತಿಹಾಸದೊಂದಿಗೆ ಬೆಸೆದುಕೊಂಡಿದೆ. 900 ವರ್ಷ ಇತಿಹಾಸ ಹೊಂದಿರುವ ಕ್ಷೇತ್ರ, 3 ದಶಕದಿಂದ ಸಾಕಷ್ಟುಪ್ರಗತಿ ಕಂಡಿದೆ. ಭಕ್ತರು ಸಹಕಾರದಿಂದ ಸುಸಜ್ಜಿತ ದಾಸೋಹ ಭವನ ನಿರ್ಮಾಣ ಆಗಿರುವುದು ಶ್ಲಾಘನೀಯ ಎಂದು ಸುರೇಶ್ ಹೇಳಿದರು.



ಪುಷ್ಪಗಿರಿ ಮಠದ ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಹಳೇಬೀಡು ವಿಶ್ವಪರಂಪರೆ ತಾಣವಾಗಿದೆ. ಆದರೆ ಮೂಲಸೌಲಭ್ಯ ದೊರಕಿಸಲು ಸ್ಥಳಾವಕಾಶದ ಕೊರತೆಯಾಗಿದೆ. ಹಳೇಬೀಡಿಗೆ ಆಗಮಿಸುವ ಪ್ರವಾಸಿಗರನ್ನು ಸಂತೈಸುವಂತಹ ಅಂತಾರಾಷ್ಟ್ರೀಯ ಕ್ಷೇತ್ರವಾಗಿ ಪುಷ್ಪಗಿರಿ ಬೆಳೆಯಬೇಕು. ಜನರು ಗಳಿಸಿದ ಸಂಪತ್ತಿನಲ್ಲಿ ಸ್ವಲ್ಪ ಭಾಗವನ್ನಾದರೂ ಸಮಾಜಕ್ಕೆ ಅರ್ಪಿಸಿದರೆ ಬದುಕು ಸಾರ್ಥಕವಾಗುತ್ತದೆ ಎಂದು ಹೇಳಿದರು.

ಧಾರ್ಮಿಕ ಸಂಘಟನೆ ಇದ್ದರೆ ಮಾತ್ರ ಜನರು ಶಾಂತಿ ಸುವ್ಯವಸ್ಥೆಯಿಂದ ಬದುಕುತ್ತಾರೆ. ಭಕ್ತರು ಸಂಘಟಿತರಾಗಿದ್ದರಿಂದ ಪುಷ್ಪಗಿರಿಯಲ್ಲಿ ದಾಸೋಹ ಭವನ ತಲೆ ಎತ್ತಿನಿಂತಿದೆ. ಪುಷ್ಪಗಿರಿ ಭಕ್ತರ ಶ್ರಮದಿಂದ ಕ್ಷೇತ್ರದ ದೇವಾಲಯಗಳು ಜೀರ್ಣೋದ್ದಾರ ಕಂಡಿವೆ. ಪುಷ್ಪಗಿರಿ ದೇವಾಲಯದ ದಾಸೋಹಕ್ಕೆ ಪ್ರತಿದಿನ 50000 ರೂ.ವರೆಗೂ ಹಣ ವೆಚ್ಚವಾಗುತ್ತದೆ. ಹುಟ್ಟಿದ ಹಬ್ಬ ಮೊದಲಾದ ಸಂದರ್ಭದಲ್ಲಿ ಅನಗತ್ಯ ವೆಚ್ಚ ಮಾಡುವ ಬದಲು ಸಂಬಂಧಿಸಿದ ದಿನಾಂಕದಂದು ಭಕ್ತರು ದಾಸೋಹ ವಹಿಸಿಕೊಳ್ಳಬಹುದು ಎಂದು ಸ್ವಾಮೀಜಿ ಹೇಳಿದರು.

ದಾಸೋಹ ಸಮಿತಿ ಅಧ್ಯಕ್ಷ ಎಂ.ವಿ.ಸೋಮಸುಂದರ್ ಮಾತನಾಡಿ, ಪುಷ್ಪಗಿರಿ ಮಲ್ಲಿಕಾರ್ಜುನ ಸ್ವಾಮಿಯನ್ನು ಮನೆ ದೇವರೆಂದು ನಂಬಿದವರು ದೇಶದ ವಿವಿಧೆಡೆ ನೆಲೆಸಿದ್ದಾರೆ. ಈಗ ವಿದೇಶದಲ್ಲಿಯೂ ಭಕ್ತರಿದ್ದಾರೆ ಎಂದರು.

ಕೋಳಗುಂದ ಕೇದಿಗೆ ಮಠದ ಜಯಚಂದ್ರಶೇಖರ ಸ್ವಾಮೀಜಿ, ದಾಸೋಹ ಸಮಿತಿ ಕಾರ್ಯದರ್ಶಿ ಸಂಗಮ್, ಮಾಜಿ ಶಾಸಕ ಕೆ.ಎಸ್. ಲಿಂಗೇಶ್, ಸ್ವಾತಂತ್ರ್ಯ ಹೋರಾಟಗಾರ ಎಸ್.ಎಂ.ಬಸವರಾಜಪ್ಪ, ಪುಷ್ಪಗಿರಿ ಮಠದ ಕಾರ್ಯದರ್ಶಿ ಗ್ರಾನೈಟ್ ರಾಜಶೇಖರ್, ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ನವಿಲೆ ಪರಮೇಶ್, ತಾಲ್ಲೂಕು ಅಧ್ಯಕ್ಷ ಎಂ.ಎಸ್.ಬಸವರಾಜು, ಸಮಾಜ ಮುಖಂಡರಾದ ಡಾ.ಶಿವಪ್ಪ, ಬಿ.ಡಿ.ಬಸವಣ್ಣಪ್ಪ, ಸಿ.ಎನ್.ರವಿ, ಬೇಲೂರು ಶಿವಕುಮಾರ ಸ್ವಾಮೀಜಿ ಟ್ರಸ್ಟ್ ಕಾರ್ಯಾಧ್ಯಕ್ಷ ಧರಣೇಂದ್ರ, ಗ್ರಾಮ ಪಂಚಾಯಿತಿ ಅಧ್ಯಕ್ಷ ಮೋಹನ್ ಕುಮಾರ್, ಪಿಡಿಒ ರಘುನಾಥ್, ಮಿಲ್ ಮಲ್ಲಣ್ಣ ಇನ್ನಿತರರಿದ್ದರು.

## ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಸಭೆ



**ಹಾಸನ: ಮತದಾರರ ಪಟ್ಟಿಗಳ ಸಮಗ್ರ ಪರಿಷ್ಕರಣೆ 2026 ರ ಸಂಬಂಧ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶುಕ್ರವಾರ ಜಿಲ್ಲೆಯ ಎಲ್ಲಾ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಅಪರ ಜಿಲ್ಲಾಧಿಕಾರಿ ಮಂಜುನಾಥ್ ಅವರು ಸಭೆ ನಡೆಸಿದರು.**

**ಈ ವೇಳೆಯಲ್ಲಿ ಮತದಾರರ ಪಟ್ಟಿಗಳ ಸಮಗ್ರ ಪರಿಷ್ಕರಣೆ 2026 ರ ಕೈಪಿಡಿಯನ್ನು ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಚುನಾವಣೆ ತಹಶೀಲ್ದಾರ್ ಕುಂಬಾರ ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.**



**ಹಾಸನ: ಚುಟುಕು ಸಾಹಿತಿ ಪ್ರೇಮ ಮಂಜುನಾಥ್‌ಗೆ ಬೆಂಗಳೂರಿನ ರಾಷ್ಟ್ರೀಯ ಶೈಕ್ಷಣಿಕ ದ್ವಿಭಾಷ ಮಾಸ ಪತ್ರಿಕೆ ನೀಡುವ ರಾಜ್ಯ ಮಟ್ಟದ ಶಿಕ್ಷಣ ರತ್ನ -2025 ಪ್ರಶಸ್ತಿ ನೀಡಿ ಗೌರವಿಸಿದ್ದಾರೆ. ಈಗಾಗಲೇ ಚುಟುಕು ಸಾಹಿತ್ಯಕ್ಕೆ ಸಂಬಂಧಿಸಿದಂತೆ ಕೃತಿಯನ್ನು ಪ್ರಕಟಿಸಿರುವ ಇವರು ಕಿತ್ತೂರು ರಾಣಿ ಚೆನ್ನಮ್ಮ, ಧ್ವನಿ ಕೊಟ್ಟ ಧಣಿ ರಾಜ್ಯ ಪ್ರಶಸ್ತಿಯಂಥಹ ಹಲವು ರಾಜ್ಯ ಹಾಗೂ ಜಿಲ್ಲಾ ಮಟ್ಟದ ಪ್ರಶಸ್ತಿ ಪಡೆದಿದ್ದಾರೆ. ಹತ್ತಾರು ಕಾರ್ಯಕ್ರಮಗಳನ್ನು ಆಯೋಜಿಸಿರುವ ಕೀರ್ತಿ ಇವರದ್ದಾಗಿದೆ. ಉತ್ತಮ ಯೋಗ ಪಟುವಾದ ಇವರು ನೂರಾರು ಕಾರ್ಯಕ್ರಮ ನಡೆಸುವುದರೊಂದಿಗೆ ಹಲವಾರು ಯೋಗ ಶಿಷ್ಯರನ್ನು ತಯಾರು ಮಾಡಿದ್ದಾರೆ. ಇವರ ಈ ಎಲ್ಲಾ ಸೇವೆಯನ್ನು ಗುರುತಿಸಿ ಚಲನಚಿತ್ರ ನಿರ್ದೇಶಕ ಹಾಗೂ ನಟ ಎಸ್ ನಾರಾಯಣ, ಖ್ಯಾತ ಪೊಲೀಸ್ ಅಧಿಕಾರಿ ಅರವಿಂದ ಮಾಲಾಗತ್ತಿ ಇನ್ನಿತರ ಪ್ರಮುಖರ ಉಪಸ್ಥಿತಿಯಲ್ಲಿ ಪ್ರಶಸ್ತಿ ಪ್ರಧಾನ ಮಾಡಲಾಯಿತು.**

## ದಕ್ಷಿಣ ಫಿಲಿಪೈನ್ಸ್‌ನಲ್ಲಿ 7.6 ರಷ್ಟು ಭೂಕಂಪ

• ಪ್ರಜೋದಯ ವರದಿ

**ಮನಿಲಾ:** ದಕ್ಷಿಣ ಫಿಲಿಪೈನ್ಸ್ ಪ್ರಾಂತ್ಯದಲ್ಲಿ ಶುಕ್ರವಾರ ಬೆಳಿಗ್ಗೆ 7.6 ರ ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿದ್ದು, ಅಪಾಯಕಾರಿ ಸುನಾಮಿ ಉಂಟಾಗುವ ಸಾಧ್ಯತೆಯಿದೆ. ದಾವೋ ಓರಿಯೆಂಟಲ್ ಪ್ರಾಂತ್ಯದ ಮನಾಯ್ ಪಟ್ಟಣದ ಆಗ್ನೇಯಕ್ಕೆ ಸುಮಾರು 62 ಕಿಲೋಮೀಟರ್ (38 ಮೈಲುಗಳು) ದೂರದಲ್ಲಿ 10 ಕಿಲೋ ಮೀಟರ್ ಆಳದಲ್ಲಿ ಭೂಕಂಪ ಸಂಭವಿಸಿದೆ.

ಭೂಕಂಪದ ಕೇಂದ್ರದಿಂದ 300 ಕಿಲೋಮೀಟರ್ (186 ಮೈಲುಗಳು) ಒಳಗೆ ಅಪಾಯಕಾರಿ ಅಲೆಗಳು ಸುನಾಮಿ ಅಲೆಗಳು ಉಂಟಾಗುವ ಸಾಧ್ಯತೆ ಇರುವುದಾಗಿ ಹೊನೊಲುಲುವಿನ ಪೆಸಿಫಿಕ್ ಸುನಾಮಿ ಎಚ್ಚರಿಕೆ ಕೇಂದ್ರ ಹೇಳಿದೆ.

# ಡಾ.ಮೊಗಳ್ಳಿ ಗಣೇಶ್‌ಗೆ ಮರಣೋತ್ತರ ರಾಜ್ಯೋತ್ಸವ ಪ್ರಶಸ್ತಿಗೆ ಮನವಿ

• ಪ್ರಜೋದಯ ವರದಿ

**ಹಾಸನ:** ಸಾಹಿತಿ ಕಥೆಗಾರರೂ ಆದ ದಿ.ಡಾ.ಮೊಗಳ್ಳಿ ಗಣೇಶ್ ಅವರಿಗೆ ರಾಜ್ಯ ಸರ್ಕಾರ ಮರಣೋತ್ತರವಾಗಿ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ನೀಡಲು ಮುಂದಾಗಬೇಕು ಎಂದು ಸಾಹಿತಿ ಸಿ.ಸುವರ್ಣ ಕೆ.ಟಿ. ಶಿವಪ್ರಸಾದ್ ಮನವಿ ಮಾಡಿದ್ದಾರೆ.

ನಗರದಲ್ಲಿ ದಲಿತ ಸಂಘರ್ಷ ಸಮಿತಿ ಹಾಗೂ ಡಾ.ಮೊಗಳ್ಳಿ ಗಣೇಶ್ ಸಾಹಿತ್ಯಾಭಿಮಾನಿಗಳು ವತಿಯಿಂದ ಆಯೋಜಿಸಿದ್ದ ಡಾ.ಮೊಗಳ್ಳಿಗಣೇಶ್ ಮತ್ತು ದೇವೇಂದ್ರ ಹೆಗ್ಗಡೆ ಅವರ ನುಡಿ ನಮನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಡಾ.ಮೊಗಳ್ಳಿ ಗಣೇಶ್ ಅವರು ಅಕ್ಷರವನ್ನೇ ತಮ್ಮ ಅಸ್ತ್ರವಾಗಿಸಿಕೊಂಡು ಕಥೆ,ಕಾದಂಬರಿ, ಪ್ರಬಂಧ,ಸಂಶೋಧನ ಕೃತಿ, ಬೀದಿನಾಟಕ, ಕಾವ್ಯ ಹೀಗೆ ಹಲವು



ಪ್ರಕಾರಗಳಲ್ಲಿ ಸಾಹಿತ್ಯ ಕೃಷಿಯನ್ನು ಮಾಡಿ ಪ್ರಖ್ಯಾತಿಯನ್ನು ಗಳಿಸಿದ್ದು ಇವರ ಸಾಹಿತ್ಯ ರಾಜ್ಯ, ರಾಷ್ಟ್ರ, ಅಂತರರಾಷ್ಟ್ರಮಟ್ಟದಲ್ಲಿ ಮನ್ನಣೆಯನ್ನು ಪಡೆದಿದೆ.ಇವರ ಸಾಹಿತ್ಯ ಸೇವೆ ನಾಡಿಗೆ ಅಗಾಧವಾಗಿದೆ ಸದಾ ಸಮಾಜ ಜಾತಿ ಧರ್ಮ ವರ್ಣ ವ್ಯವಸ್ಥೆಯ ವಿರುದ್ಧ ಬೇಸರಗೊಂಡಿದ್ದರು ಕುವೆಂಪು, ಪೂರ್ಣಚಂದ್ರ ತೇಜಸ್ವಿ, ಪಿ.ಲಂಕೇಶ್, ದೇವನೂರು ಮಹಾದೇವ್, ಸಿದ್ದಲಿಂಗಯ್ಯ ಅವರ ಬರಹಗಳ ಬಗ್ಗೆ ಅಪಾರವಾದ ಪ್ರೀತಿ ಇತ್ತು. ಇವರು ಸ್ವಾಭಿಮಾನಿ ಮಾತು ಮೆದುವಾದರು ಬಹಳ ಅರ್ಥಗರ್ಭಿತವಾಗಿರುತ್ತಿತ್ತು ಎಂದರು.

ಹಿರಿಯ ದಲಿತ ಹೋರಾಟಗಾರ ಕೃಷ್ಣದಾಸ್ ಮಾತನಾಡಿ, ಡಾ.ಮೊಗಳ್ಳಿ ಗಣೇಶ್ ಅವರು ತಾವು ಮೈಸೂರು ಮಾನಸಗಂಗೋತ್ರಿಯಲ್ಲಿ ಎಂ.ಎ. ಓದುತ್ತಿದ್ದಾಗ ಅವರ ಒಡನಾಟದ ಬಗ್ಗೆ ಸವಿಸವಿ ನೆನಪುಗಳನ್ನು ಮೆಲುಕು ಹಾಕುತ್ತಾ ಮೊಗಳ್ಳಿಗಣೇಶ್ ನೇರ ನುಡಿಯುಳ್ಳವರು ಅವರ ವಿಮರ್ಶಾ ಕೃತಿ ತಕರಾರು ಇಡೀ ಸಾಹಿತ್ಯ ಲೋಕವನ್ನೇ ಅವರತ್ತ ನೋಡುವಂತೆ ಮಾಡಿದವರು ಮೊಗಳ್ಳಿಯವರು.ಸರ್ಕಾರ ಈಗಲಾದರೂ ಅವರಿಗೆ ಮರಣೋತ್ತರ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಲಿ ಎಂದು ಆಗ್ರಹಿಸಿದರು.

ಎಸ್ಸಿ, ಎಸ್ಟಿ ನಿವೃತ್ತ ಅಧಿಕಾರಿಗಳ ಸಂಘದ ಅಧ್ಯಕ್ಷ ಕಾಳಯ್ಯ, ಚಿಂತಕರು ಪ್ರಾಧ್ಯಾಪಕ ಪ್ರೊ. ಕೃಷ್ಣ ಅತ್ನಿ, ಅಂತರ ರಾಷ್ಟ್ರೀಯ ಚಿತ್ರ ಕಲಾವಿದ ಕೆ.ಟಿ.ಶಿವಪ್ರಸಾದ್ ಉಪನ್ಯಾಸಕ ವೆಂಕಟೇಶ್ ದೇವಿಪುರ, ಆರ್‌ಪಿಐ ರಾಜ್ಯಾಧ್ಯಕ್ಷ ಸತೀಶ್, ಹಿರೇಶ್ ಈರೇಹಳ್ಳಿ, ಅಂಬುಗ ಮಲ್ಲೇಶ್, ಬೌದ್ಧ ಮಹಾಸಭಾದ ಅಧ್ಯಕ್ಷ ಬಸವ ರಾಜ್, ರಾಜಶೇಖರ್, ಲಕ್ಕಪ್ಪ, ಮಲ್ಲಯ್ಯ, ಗುರುಮೂರ್ತಿ, ಗೋವಿಂದರಾಜು, ದ್ಯಾವಪ್ಪ ಇನ್ನಿತರರಿದ್ದರು.

## ಅ.19 ರಂದು ಶ್ವಾನ ಪ್ರದರ್ಶನ



ಹಾಸನ: ನಗರದ ಅಧಿದೇವತೆ ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಆಚರಣೆ ಅಂಗವಾಗಿ ಅ.19 ರಂದು ಹಾಸನ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಆವರಣದಲ್ಲಿ ಶ್ವಾನ ಪ್ರದರ್ಶನವನ್ನು ಆಯೋಜಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಶ್ವಾನಪ್ರೇಮಿಗಳು ಹಾಗೂ ಸ್ಪರ್ಧಾ ಆಕಾಂಕ್ಷಿಗಳು ಭಾಗವಹಿಸುವಂತೆ ಮನವಿ ಮಾಡಲಾಗಿದೆ.

**ಕಾಬೂಲ್‌ನಲ್ಲಿ ರಾಯಭಾರ ಕಚೇರಿ ಪುನಃಸ್ಥಾಪನೆ | ತಾಂತ್ರಿಕ ಮಿಷನ್ ಮೇಲ್ದರ್ಜೆಗೇರಿಸುವ ಘೋಷಣೆ**

# ಪಾಕಿಸ್ತಾನಕ್ಕೆ ಭಾರತ ಠಕ್ಕರ್: ಅಫ್ಘಾನಿಸ್ತಾನ ಜೊತೆ ಹೊಸ ಸಂಬಂಧ

• ಪ್ರಜೋದಯ ವರದಿ

**ನವದೆಹಲಿ:** ಮಹತ್ವದ ರಾಜತಾಂತ್ರಿಕ ಹೆಜ್ಜೆಯಾಗಿ, ಕಾಬೂಲ್‌ನಲ್ಲಿರುವ ತನ್ನ ತಾಂತ್ರಿಕ ಮಿಷನ್ ಅನ್ನು ಪೂರ್ಣ ಪ್ರಮಾಣದ ರಾಯಭಾರ ಕಚೇರಿಯಾಗಿ ಮೇಲ್ದರ್ಜೆಗೇರಿಸುವ ಬಗ್ಗೆ ಭಾರತ ಘೋಷಿಸಿದೆ.


ಭಾರತವು ತಾಲಿಬಾನ್ ಆಡಳಿತವನ್ನು ಅಧಿಕೃತವಾಗಿ ಗುರುತಿಸದಿದ್ದರೂ, ಅಫ್ಘಾನಿಸ್ತಾನದೊಂದಿಗೆ ತನ್ನ ಸಂಬಂಧವನ್ನು ಗಟ್ಟಿಗೊಳಿಸುತ್ತಿದೆ. ಭಾರತ ಮತ್ತು ಅಫ್ಘಾನಿಸ್ತಾನದ ನಡುವಿನ ವಿದೇಶಾಂಗ ನೀತಿಯಲ್ಲಿ ಮಹತ್ವದ ಬೆಳವಣಿಗೆಯಾಗಿದ್ದು,ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರು ಕಾಬೂಲ್‌ನಲ್ಲಿನ ಭಾರತದ ತಾಂತ್ರಿಕ ಮಿಷನ್ ಅನ್ನು ಪೂರ್ಣ ಪ್ರಮಾಣದ ರಾಯಭಾರ ಕಚೇರಿಯಾಗಿ ಮೇಲ್ದರ್ಜೆಗೇರಿಸುವುದಾಗಿ ಘೋಷಿಸಿದ್ದಾರೆ.

ಇದು ತಾಲಿಬಾನ್ ಆಡಳಿತದ ಅಡಿಯಲ್ಲಿ ಅಫ್ಘಾನಿಸ್ತಾನದೊಂದಿಗೆ ಸಂಬಂಧವನ್ನು ಇನ್ನಷ್ಟು ಗಾಢಗೊಳಿಸುವ ಭಾರತದ ಉದ್ದೇಶದ ಸ್ಪಷ್ಟ ಸಂಕೇತವಾಗಿದೆ. ವಿದೇಶಾಂಗ ಸಚಿವ ಎಸ್ ಜೈಶಂಕರ್ ಮತ್ತು ಅಫ್ಘಾನಿಸ್ತಾನದ ಹಂಗಾಮಿ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಕಿ ನಡುವಿನ ಸಭೆಯಲ್ಲಿ ಈ ಘೋಷಣೆ ಬಂದಿದ್ದು, ಪುನರ್ನಿರ್ಮಾಣ ಮತ್ತು ಮಾನವೀಯ ನೆರವಿನಿಂದ ಭದ್ರತಾ ಸಹಕಾರ ಮತ್ತು ವ್ಯಾಪಾರದವರೆಗೆ ಎರಡೂ ಕಡೆಯವರು ವ್ಯಾಪಕವಾದ ಕಾರ್ಯಸೂಚಿಯನ್ನು ಚರ್ಚಿಸಿದರು.

ಬಳಿಕ ಮಾತನಾಡಿದ ಜೈಶಂಕರ್ ಅವರು, ಕಾಬೂಲ್‌ನಲ್ಲಿರುವ ಭಾರತದ ತಾಂತ್ರಿಕ ಕಚೇರಿಯನ್ನು ಭಾರತದ ರಾಯಭಾರ ಕಚೇರಿಯ ಸ್ಥಾನಮಾನಕ್ಕೆ ಉನ್ನತೀಕರಿಸುವುದಾಗಿ ಘೋಷಿಸಲು ನನಗೆ ಸಂತೋಷವಾಗಿದೆ. ಅಫ್ಘಾನಿಸ್ತಾನದ ಸಾರ್ವಭೌಮತ್ವ, ಭೌಗೋಳಿಕ ಸಮಗ್ರತೆ ಮತ್ತು ಸ್ವಾತಂತ್ರ್ಯಕ್ಕೆ ಭಾರತವು ಸಂಪೂರ್ಣವಾಗಿ ಬದ್ಧವಾಗಿದೆ,'' ಎಂದು ಹೇಳಿದರು.

ಭಾರತವು ಆರು ಹೊಸ ಅಭಿವೃದ್ಧಿ ಯೋಜನೆಗಳನ್ನು ಸಹ ಪ್ರಾರಂಭಿಸಲಿದೆ. ಅವುಗಳ ವಿವರಗಳನ್ನು ಮಾತುಕತೆಯ ನಂತರ ಅಂತಿಮಗೊಳಿಸಲಾಗುವುದು ಎಂದು ಜೈಶಂಕರ್ ಆರೋಗ್ಯ ರಕ್ಷಣೆಯ ಕುರಿತು ಘೋಷಿಸಿದರು.

``ಭಾರತವು ಅಫ್ಘಾನ್ ಆಸ್ಪತ್ರೆಗಳಿಗೆ ಮತ್ತು ಸ್ಕ್ಯಾನ್ ಯಂತ್ರಗಳನ್ನು ಒದಗಿಸುತ್ತದೆ ಮತ್ತು ರೋಗನಿರೋಧಕ ಶಕ್ತಿ ಮತ್ತು ಕ್ಯಾನ್ಸರ್ ಔಷಧಿಗಳಿಗೆ ಲಸಿಕೆಗಳನ್ನು ತಲುಪಿಸುತ್ತದೆ ಎಂದರು, ಅಂತೆಯೇ ಅವರು 20 ಆಂಬ್ಯುಲೆನ್ಸ್ ದೇಣಿಗೆಯ ಭಾಗವಾಗಿ ಐದು ಆಂಬ್ಯುಲೆನ್ಸ್‌ಗಳನ್ನು ಅಫ್ಘಾನ್ ನಿಯೋಗಕ್ಕೆ ಹಸ್ತಾಂತರಿಸಿದರು ಮತ್ತು ಮೂಲಕ ಔಷಧ ಪುನರ್ವಸತಿ ಸಾಮಗ್ರಿಗಳ ನಿರಂತರ ಪೂರೈಕೆಯನ್ನು ಗಮನಿಸಿದರು.



ತಾಲಿಬಾನ್ ತನ್ನ ಭೂಮಿಯನ್ನು ಭಾರತದ ವಿರುದ್ಧ ಭಯೋತ್ಪಾದಕ ದಾಳಿಗಳಿಗೆ ಬಳಸಲು ಅವಕಾಶ ನೀಡುವುದಿಲ್ಲ ಎಂದು ಅಫ್ಘಾನಿಸ್ತಾನ ವಿದೇಶಾಂಗ ಸಚಿವ ಮುತ್ತಕಿ ದೃಢವಾಗಿ ಹೇಳಿದ್ದಾರೆ. ಜೈಶಂಕರ್ ಅವರೊಂದಿಗಿನ ಸಭೆಯಲ್ಲಿ ಮತ್ತು ನಂತರ, ಮುತ್ತಕಿ ಭಾರತವನ್ನು ಶ್ಲಾಘಿಸಿದ್ದು, ಆಗಸ್ಟ್ 31 ರಂದು ಸಂಭವಿಸಿದ ಭೀಕರ ಭೂಕಂಪದ ನಂತರ ಭಾರತ ತಕ್ಷಣದ ಸಹಾಯ ಒದಗಿಸಿದ್ದನ್ನು ಸ್ಮರಿಸಿದರು.

ಶಿಕ್ಷಣದ ಕುರಿತು, ನಡೆಯುತ್ತಿರುವ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳು ಮತ್ತು ತರಬೇತಿಯನ್ನು ಉಲ್ಲೇಖಿಸಿ ಮಾತನಾಡಿದ ಜೈಶಂಕರ್ ಅಫ್ಘನ್ ವಿದ್ಯಾರ್ಥಿಗಳಿಗೆ ಭಾರತದ ಬದ್ಧತೆಯನ್ನು ಪುನರುಚ್ಚರಿಸಿದರು. ಏಪ್ರಿಲ್ 2025 ರಲ್ಲಿ ಹೊಸದಾಗಿ ಪರಿಚಯಿಸಲಾದ ವೀಸಾ ಮಾಡ್ಯೂಲ್ ವೈದ್ಯಕೀಯ, ವ್ಯವಹಾರ ಮತ್ತು ವಿದ್ಯಾರ್ಥಿ ಉದ್ದೇಶಗಳಿಗಾಗಿ ನೀಡಲಾದ ವೀಸಾಗಳಲ್ಲಿ ಗಮನಾರ್ಹ ಹೆಚ್ಚಳಕ್ಕೆ ಕಾರಣವಾಗಿದೆ. ಅಫ್ಘಾನ್ ಸಾರ್ವಭೌಮತ್ವ, ಪ್ರಾದೇಶಿಕ ಸಮಗ್ರತೆ ಮತ್ತು ಸ್ವಾತಂತ್ರ್ಯಕ್ಕೆ ಭಾರತ ಸಂಪೂರ್ಣವಾಗಿ ಬದ್ಧವಾಗಿದೆ. ನಮ್ಮ ನಡುವಿನ ನಿಕಟ ಸಹಕಾರವು ನಿಮ್ಮ ರಾಷ್ಟ್ರೀಯ ಅಭಿವೃದ್ಧಿಗೆ ಹಾಗೂ ಪ್ರಾದೇಶಿಕ ಸ್ಥಿರತೆ ಮತ್ತು ಸ್ಥಿತಿಸ್ಥಾಪಕತ್ವಕ್ಕೆ ಕೊಡುಗೆ ನೀಡುತ್ತದೆ ಎಂದು ಹೇಳಿದರು.

**ತಾಲಿಬಾನ್ ಸರ್ಕಾರ ರಚನೆ ಬಳಿಕ ದೂರಾಗಿದ್ದ ಭಾರತ:** ನಾಲ್ಕು ವರ್ಷಗಳ ಹಿಂದೆ, ತಾಲಿಬಾನ್ ಮತ್ತು ಆಗಿನ ಅಫ್ಘಾನ್ ಸರ್ಕಾರದ ನಡುವಿನ ಹೋರಾಟದಿಂದಾಗಿ ಕಾಬೂಲ್‌ನಲ್ಲಿನ ರಾಯ ಭಾರ ಕಚೇರಿಯನ್ನು ಕಡಿಮೆ ಸ್ಥಾನಮಾನಕ್ಕೆ ಇಳಿಸಲಾಗಿತ್ತು ಮತ್ತು ಸಣ್ಣ ನಗರಗಳಲ್ಲಿನ ಕಾನ್ಸುಲೇಟ್ ಕಚೇರಿಗಳನ್ನು ಮುಚ್ಚಲಾಗಿತ್ತು.

ಅಂದಿನ ಹಿಂಸಾಚಾರದಿಂದಾಗಿ ಭಾರತ ಸರ್ಕಾರವು ರಾಯಭಾರ ಕಚೇರಿಯ ಸಿಬ್ಬಂದಿಯನ್ನು ಸ್ಥಳಾಂತರಿಸಲು ಎರಡು ಸಿ-17 ಸಾರಿಗೆ ವಿಮಾನಗಳನ್ನು ಆಗಸ್ಟ್ 15 ಮತ್ತು 16 ರಂದು ಕಳುಹಿಸಿತ್ತು.

10 ತಿಂಗಳ ನಂತರ, ತಾಲಿಬಾನ್ ಆಡಳಿತವು ಭಾರತದ ಅಧಿಕಾರಿಗಳಿಗೆ ಸೂಕ್ತ ಭದ್ರತೆ ಒದಗಿಸುವ ಭರವಸೆ ನೀಡಿದ ನಂತರ, ಕಾಬೂಲ್‌ನಲ್ಲಿ ಭಾರತವು ತಾಂತ್ರಿಕ ತಂಡವನ್ನು ಮರಳಿ ನಿಯೋಜಿಸಿತು. ಈಗ, 2025ರ ಅಕ್ಟೋಬರ್‌ನಲ್ಲಿ, ಭಾರತ-ಅಫ್ಘಾನಿಸ್ತಾನ ಸಂಬಂಧಗಳು ಮತ್ತಷ್ಟು ಸುಧಾರಣೆಯಾಗಿವೆ. ಅಫ್ಘಾನಿಸ್ತಾನದಲ್ಲಿ ಪಾಕಿಸ್ತಾನ ಸೇನೆ ವಾಯುದಾಳಿ ನಡೆಸುತ್ತಿರುವ ಈ ಹೊತ್ತಿನಲ್ಲಿ ಉಭಯ ದೇಶಗಳ ನಡುವಿನ ಈ ಬೆಳವಣಿಗೆ ಪಾಕಿಸ್ತಾನಕ್ಕೆ ನುಂಗಲಾರದ ತುತ್ತಾಗಿದೆ.

## ರಾಜ್ಯ ಪ್ರಶಸ್ತಿಗೆ ಮಂಜುನಾಥ್ ಭಾಜನ

• ಪ್ರಜೋದಯ ವರದಿ

**ಹಾಸನ:** ಅಪರ ಜಿಲ್ಲಾಧಿಕಾರಿ ಡಾ. ವಿ.ಮಂಜುನಾಥ್ ಅವರು ಧ್ವನಿ ಕೊಟ್ಟ ಧಣಿ ರಾಜ್ಯ ಪ್ರಶಸ್ತಿಗೆ ಭಾಜನರಾಗಿದ್ದಾರೆ ಎಂದು ಅರಸು ಅಕಾಡೆಮಿ ಚಾರಿಟಬಲ್ ಟ್ರಸ್ಟ್ ಕಾರ್ಯದರ್ಶಿ ಚುಟುಕು ಯುಗಾಚಾರ್ಯ ಡಾ. ಎಂ.ಜಿ.ಆರ್. ಅರಸ್ ತಿಳಿಸಿದ್ದಾರೆ.

ಡಾ ವಿ ಮಂಜುನಾಥ್ ಅವರು ಸುಮಾರು ಎರಡು ದಶಕಗಳಿಗೂ ಹೆಚ್ಚು ಕಾಲ ಭಾರತ ದೇಶದ ರಕ್ಷಣಾ ಕಾರ್ಯದಲ್ಲಿ ಸೇವೆಯನ್ನು ಸಲ್ಲಿಸುವುದರೊಂದಿಗೆ ಶ್ರೀಲಂಕಾ ದೇಶದ ಶಾಂತಿ ಪಾಲನಾ ಪಡೆಯಲ್ಲಿ ದಕ್ಷತೆ ಮೆರೆದು ದೇಶದ ಕೀರ್ತಿಯನ್ನು ಎತ್ತಿ ಹಿಡಿದಿದ್ದಾರೆ. ಸೇನೆಯಿಂದ ನಿವೃತ್ತಿಯಾದ ನಂತರ ಕರ್ನಾಟಕ ಆಡಳಿತ ಸೇವೆಗೆ ತಹಸೀಲ್ದಾರ್ ಆಗಿ ಪಾದಾರ್ಪಣೆ ಮಾಡಿ ಇಲಾಖೆಯ ಬಹಳಷ್ಟು ಸ್ಥರದಲ್ಲಿ ನಿಷ್ಠಾವಂತ ಸೇವೆಯನ್ನು ಸಲ್ಲಿಸಿರುವುದನ್ನು ಮನಗಂಡು ಮೈಸೂರಿನಲ್ಲಿ ಏರ್ಪಡಿಸಿರುವ ಸಮಾರಂಭದಲ್ಲಿ ಸನ್ಮಾನಿಸಲಾಗುವುದು.

ಸಮಾರಂಭದ ದಿವ್ಯ ಸಾನಿಧ್ಯವನ್ನು ಸುತ್ತೂರು ವೀರ ಸಿಂಹಾಸನಾಧೀಶ್ವರರಾದ ಶ್ರೀ ಶ್ರೀ ಸುತ್ತೂರು ಶಿವರಾತ್ರಿ



ದೇಶಿಕೇಂದ್ರ ಸ್ವಾಮೀಜಿಯವರು ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಮಾಜಿ ಸಚಿವರು ಹಾಗೂ ಭಾರತ್ ಸ್ಕೌಟ್ ಅಂಡ್ ಗೈಡ್ಸ್ ಆಯುಕ್ತ ಪಿಜಿಆರ್ ಸಿಂಧ್ಯ, ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಶಾಸಕ ತನ್ವೀರ್ ಸೇಠ್, ಮಾಜಿ ಸಚಿವ ಶಿವಣ್ಣ, ಚುಟುಕು ಸಾಹಿತ್ಯ ಪರಿಷತ್ ಸಂಸ್ಥಾಪಕ ಡಾ ಎಂ ಜಿ ಆರ್ ಅರಸ್ ಇನ್ನಿತರರು ಉಪಸ್ಥಿತರಿರುವರು.

ಪ್ರಶಸ್ತಿ ಪುರಸ್ಕೃತ ಡಾ. ವಿ. ಮಂಜುನಾಥ್ ಅವರನ್ನು ಹಾಸನ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ಬಾ.ನಂ.ಲೋಕೇಶ ಹಾಗೂ ಜಿಲ್ಲೆಯ ಎಲ್ಲ ತಾಲ್ಲೂಕಿನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಇನ್ನಿತರರು ಅಭಿನಂದಿಸಿದ್ದಾರೆ.

# ಕೆಲವರ ಅನುಕೂಲಕ್ಕಾಗಿ ತೊಂದರೆಯಾಗಬಾರದು

» ಮೊದಲನೇ ಪುಟದಿಂದ

ಮುಂದಿದೆ. ಬೆಂಗಳೂರಲ್ಲಿ ಏನಾಯಿತು, ತಮಿಳುನಾಡಲ್ಲಿ ಏನಾಯಿತು ಎಲ್ಲವನ್ನೂ ಮರೆಯಲು ಆಗೋದಿಲ್ಲ, ಕಾರ್ಯಕ್ರಮದಲ್ಲಿ ಏನೂ ಎಡವಟ್ಟು ಆಗಬಾರದೆಂದರೆ ಎಲ್ಲರೂ ಸಹಕಾರ ಕೊಡಬೇಕೆಂದು ಹೇಳಿದರು.

ಹಾಸನಾಂಬ ದೇವಿಯ ದರ್ಶನ ಪಡೆಯಲು ಇಚ್ಛಿಸುವ ಗೌರವಾನ್ವಿತ ಸಚಿವರು, ನ್ಯಾಯಾಧೀಶರು, ಶಾಸಕರು, ಸಂಸದರು ಮತ್ತು ಶಾಸಕರು, ಹಿರಿಯ ಅಧಿಕಾರಿಗಳು ಮತ್ತು ಇತರರಿಗೆ ಪ್ರೋಟೋಕಾಲ್ ಸವಲತ್ತು ಹೊಂದಿರುವ ಗಣ್ಯರಿಗೆ ಅ.11 ರಿಂದ 20ರ ವರೆಗೆ ಬೆಳಿಗ್ಗೆ 10.30ರಿಂದ ಮಧ್ಯಾಹ್ನ 12.30 ರವರೆಗೆ ವಿಶೇಷ ಪ್ರವೇಶ ಒದಗಿಸಲಾಗಿದೆ. ಆದ್ದರಿಂದ, ನಿಮ್ಮ ಭೇಟಿಗೆ ಮುಂಚಿತವಾಗಿ, ಭೇಟಿ ಸಮಯ ಮತ್ತು ದಿನಾಂಕದ ಬಗ್ಗೆ ತಿಳಿಸಬೇಕು. ಗಣ್ಯರ ದರ್ಶನವನ್ನು ಗೌರವ ಯುತವಾಗಿ ಸುಗಮ ಗೊಳಿಸುವುದನ್ನು ಖಚಿತ ಪಡಿಸಿಕೊಳ್ಳುವುದು ಜಿಲ್ಲಾಡಳಿತಕ್ಕೆ ಅಗತ್ಯವಿದೆ. ನಿಗದಿತ ಸಮಯದಲ್ಲಿ ಮಾತ್ರ ವಿಶೇಷ ಪ್ರವೇಶ ಲಭ್ಯವಿರುತ್ತದೆ ಎಂಬುದನ್ನು ದಯವಿಟ್ಟು ನೆನಪಿನಲ್ಲಿಟ್ಟುಕೊಳ್ಳಿ, ಹಾಗಾಗಿ ಮೊದಲೇ ಸಮಯ ಮತ್ತು ದಿನವನ್ನು ನಿಗದಿಪಡಿಸಿ ಎಂದು ವಿನಂತಿಸಿದ್ದಾರೆ.

ದಿನಾಂಕ ಮತ್ತು ಸಮಯದ ದೃಢೀಕರಣಕ್ಕಾಗಿ ಹೆಚ್ಚುವರಿ ಜಿಲ್ಲಾಧಿಕಾರಿ ಮಂಜುನಾಥ್ ಅವರನ್ನು 08172-250554 ಅಥವಾ ಸಹಾಯಕ ಆಯುಕ್ತರು(ಎಸಿ), ಸಕಲೇಶಪುರ ರಾಜೇಶ್ ಅವರನ್ನು 08172-257119 ಸಂಪರ್ಕಿಸ ಬಹುದು. ನಿಮ್ಮ ನಿಗದಿತ ಸಮಯಕ್ಕೆ ಅರ್ಧ ಗಂಟೆ ಮೊದಲು ನಗರದ ಸರ್ಕಾರಿ ಪ್ರವಾಸಿ ಮಂದಿರಕ್ಕೆ ಆಗಮಿಸಿ, ಜಿಲ್ಲಾಡಳಿತದ ನೇಮಿಸಿರುವ ನೋಡಲ್ ಅಧಿಕಾರಿ ನಿಮ್ಮನ್ನು ದರ್ಶನಕ್ಕಾಗಿ ಗೊತ್ತುಪಡಿಸಿದ ವಾಹನದಲ್ಲಿ ದೇವಸ್ಥಾನಕ್ಕೆ ಕರೆದೊಯ್ಯುತ್ತಾರೆ, ಎಲ್ಲರೂ ಸಹಕರಿಸುವಂತೆ ಮನವಿ ಮಾಡಿದ್ದಾರೆ.

ಸಂಸದ ಶ್ರೇಯಸ್ ಪಟೇಲ್, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ದೇವಸ್ಥಾನದ ಆಡಳಿತಾಧಿಕಾರಿ ಮಾರುತಿ ಮತ್ತಿತರರು ಹಾಜರಿದ್ದರು.



### ನಿಯಮ ಎಲ್ಲರಿಗೂ ಅನ್ವಯ, ಅನುಸರಿಸಬೇಕು

ಅನೇಕ ಶಾಸಕರು ಜಿಲ್ಲಾಡಳಿತದಿಂದ ಮಾಡಿರುವ ಶಿಷ್ಟಾಚಾರದ ವ್ಯವಸ್ಥೆಯನು ಸರಿ ಇದೆ ಎಂದಿದ್ದಾರೆ. ಯಾವುದೇ ಕಾರಣಕ್ಕೂ ನೀವು ಮಾಡಿರುವ ವ್ಯವಸ್ಥೆಯನ್ನು ಬದಲಾಯಿಸಬೇಡಿ ಎಂದು ತಿಳಿಸಿದ್ದಾರೆ. ಕಾನೂನು ಎಲ್ಲರಿಗಿಂತ ಮೇಲಿದೆ ನಾವು ಅದರ ಕೆಳಗೆ ಕೆಲಸ ಮಾಡಬೇಕು, ನಿಯಮ ಎಲ್ಲರಿಗೂ ಅನ್ವಯವಾಗುತ್ತದೆ, ಎಲ್ಲರೂ ಅದನ್ನು ಅನುಸರಿಸಬೇಕು. ಅದಕ್ಕೆ ಗಣ್ಯರೂ ಕೂಡ ಸಹಕಾರ ಮಾಡಬೇಕಾಗುತ್ತದೆ. ಗಣ್ಯರು 10.30ಕ್ಕೆ ಬರಲು ಕಷ್ಟವಾಗುತ್ತೆದೆ ಎಂದು ಯಾರೂ ನನ್ನ ಬಳಿ ಹೇಳಿಲ್ಲ. ಸಮಯ ನಿಗದಿ ಮಾಡಿದ ಮೇಲೆ ಎಲ್ಲರೂ ಅದಕ್ಕೆ ಬದ್ಧರಾಗಿರಬೇಕು. ಸಮಯ ಮೀರಿ ಬರುತ್ತೇವೆ ಎಂದರೆ ಅದಕ್ಕೆ ಅರ್ಥ ಇರುವುದಿಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸ್ಪಷ್ಟಪಡಿಸಿದರು.

# ಸಹಕಾರ ವೃದ್ಧಿಪಡಿಸುವ ಮಾರ್ಗಗಳ ಕುರಿತು ಚಿಂತನೆ

## ಬ್ರಿಟನ್-ಭಾರತ ರಕ್ಷಣಾ ಸಚಿವರ ಭೇಟಿ

**ಮುಂಬೈ:** ಭಾರತ ಹಾಗೂ ಬ್ರಿಟನ್ ನಡುವೆ ರಕ್ಷಣಾ ವ್ಯವಹಾರಗಳ ಸಹಕಾರ ವೃದ್ಧಿಪಡಿಸುವ ಮಾರ್ಗಗಳ ಕುರಿತು ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಥ್ ಹಾಗೂ ಬ್ರಿಟನ್‌ನ ರಕ್ಷಣಾ ಖಾತೆ ರಾಜ್ಯ ಸಚಿವ ವೆರ್ನ್ ಕೊಕರ್ ಶುಕ್ರವಾರ ವಿಸ್ತೃತ ಚರ್ಚೆ ನಡೆಸಿದರು.

ಬ್ರಿಟನ್‌ನ ಕ್ಯಾರಿಯರ್ ಸ್ಟ್ರೈಕ್ ಗ್ರೂಪ್ (ಸಿಎಸ್‌ಜಿ) ಭಾರತಕ್ಕೆ ಭೇಟಿ ನೀಡಿದ ಬೆನ್ನಲ್ಲೇ ಇಲ್ಲಿ ನಡೆದ ಸಭೆಯಲ್ಲಿ ಉಭಯ ನಾಯಕರು ಹಲವು ವಿಚಾರ ಗಳ ಕುರಿತು ಚರ್ಚಿಸಿದರು. ಬ್ರಿಟನ್ ಹಾಗೂ ಭಾರತ ನಡುವಿನ ರಕ್ಷಣಾ ವ್ಯವ ಹಾರದಲ್ಲಿನ ಸಹಕಾರವನ್ನು ಮತ್ತಷ್ಟು ವೃದ್ಧಿಸುವ ನಿಟ್ಟಿನಲ್ಲಿ ಚರ್ಚೆ ನಡೆಸಿದರು ಎಂದು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಬ್ರಿಟನ್ ಪ್ರಧಾನಿ ಕಿಯರ್ ಸ್ಟಾರ್ಮರ್ ಹಾಗೂ ಪ್ರಧಾನಿ ನರೇಂದ್ರ ಮೋದಿ ನಡುವೆ ಮುಂಬೈನಲ್ಲಿ ಸಶಸ್ತ್ರ ಪಡೆಗಳ ನಡುವಿನ ದ್ವಿಪಕ್ಷೀಯ ಸಂಬಂಧ ವೃದ್ಧಿ ಕುರಿತು ವಿಸ್ತೃತ ಚರ್ಚೆ ನಡೆಸಿದ ಮರುದಿನವೇ ಈ ಸಭೆಯೂ ನಡೆದಿದೆ. ಬ್ರಿಟನ್‌ನ ರಾಜ ವೇಲ್ಸ್ ನೇತೃತ್ವದ ಸಿಎಸ್‌ಜಿ ಭಾರತದ ಪಶ್ಚಿಮ ಕರಾವಳಿ ಯಲ್ಲಿ ಭಾರತೀಯ ನೌಕಾಪಡೆಯ ಜೊತೆಗೆ ದ್ವಿಪಕ್ಷೀಯ ಕಡಲಾ ಭ್ಯಾಸ ಕೊಂಕಣ್ 25 ಯಶಸ್ವಿಯಾಗಿ ಪೂರ್ಣ ಗೊಳಿಸಿದೆ ಎಂದು ಸಂಜಯ್ ಸೇಥ್ ತಿಳಿಸಿದರು.

ಸದ್ಯ ಈ ಪಡೆಯು ಮುಂಬೈ ಹಾಗೂ ಗೋವಾದಲ್ಲಿ ಸಮುದ್ರ ಕಾರ್ಯಾಚರಣೆಯಲ್ಲಿ ತೊಡಗಿಸಿಕೊಂಡಿದೆ. ಇಂತಹ ಕಾರ್ಯಾಚರಣಾ ಸಂವಹನಗಳು ಪರಸ್ಪರ ತಿಳಿವಳಿಕೆ ಹೆಚ್ಚಿಸಿ, ಎರಡು ನೌಕಾ ಪಡೆಗಳ ಕಾರ್ಯಸಾಧ್ಯತೆಗೆ ಗಮನಾರ್ಹ ಕೊಡುಗೆ ನೀಡುತ್ತವೆಂದು ತಿಳಿಸಿದರು.



ಆತ್ಮನಿರ್ಭರತೆಯ ಪರಿಕಲ್ಪನೆಯ ಅಡಿಯಲ್ಲಿ ರಕ್ಷಣಾ ಸಲಕರಣೆಗಳ ತಯಾರಿಕೆಯಲ್ಲಿ ಭಾರತವು ಸಾಮರ್ಥ್ಯ ವೃದ್ಧಿಸಿ ಕೊಳ್ಳುತ್ತಿದ್ದು, ದೇಶೀಯ ವ್ಯವಸ್ಥೆಗಳನ್ನು ಬಲಪಡಿಸಿಕೊಂಡಿದೆ. ಈ ದಿಸೆಯಲ್ಲಿ ಉಭಯ ರಾಷ್ಟ್ರಗಳು ರಕ್ಷಣಾ ಸಹಕಾರದ ವಿವಿಧ ಆಯಾಮಗಳ ಕುರಿತು ಸಭೆಯಲ್ಲಿ ಅಭಿಪ್ರಾಯಗಳು ವ್ಯಕ್ತವಾಯಿತು.

ಜಾಗತಿಕ ರಕ್ಷಣಾ ಪೂರೈಕೆ ಸರಪಳಿಯಲ್ಲಿ ಲಭ್ಯವಾಗುವ ಅವಕಾಶ ಹಾಗೂ ಸಹ ಯೋಗದ ಕುರಿತು ಎರಡು ರಾಷ್ಟ್ರಗಳು ಬದ್ಧತೆ ವ್ಯಕ್ತಪಡಿಸಿದವು. ಇಂಡೋ ಫೆಸಿಫಿಕ್ ಹಾಗೂ ಹಿಂದೂ ಮಹಾಸಾಗರದಲ್ಲಿ ಸಹಕಾರ ವೃದ್ಧಿಪಡಿಸಲು ಒಪ್ಪಿವೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಸಭೆಯ ಬಳಿಕ ಮಾತನಾ ಡಿದ ವೆರ್ನ್ ಕೊಕರ್, ಹಿಂದೂ ಮಹಾಸಾಗರದಲ್ಲಿ ಭದ್ರತೆಯನ್ನು ಕಾಪಾಡಿ, ಸಿಎಸ್‌ಜಿಗೆ ಭಾರತದ ಬಂದರುಗಳಲ್ಲಿ ಅಭ್ಯಾಸಕ್ಕೆ ಅವ ಕಾಶ ಮಾಡಿಕೊಟ್ಟ ಭಾರತಕ್ಕೆ ಧನ್ಯ ವಾದಗಳು. ಈ ಪ್ರದೇಶದ ಭದ್ರತೆ ಹಾಗೂ ಸ್ಥಿರತೆ ನಿಟ್ಟಿನಲ್ಲಿ ಉಭಯ ರಾಷ್ಟ್ರಗಳು ಜೊತೆಗೂಡಿ ಕೆಲಸ ಮಾಡಲಿವೆ. ಈ ವಿಚಾರದಲ್ಲಿ ಭಾರತವು ನಿರ್ಣಾಯಕ ಪಾತ್ರ ವಹಿಸಲಿದ್ದು, ಮಿತ್ರ ರಾಷ್ಟ್ರದೊಂದಿಗಿನ ಜೊತೆಗೂಡಿ ಕೆಲಸ ಮಾಡುವ ಬದ್ಧತೆಯೂ ಮುಂದುವರಿ ಯಲಿದೆ ಎಂದು ತಿಳಿಸಿದರು.

### ಜಮ್ಮು-ಕಾಶ್ಮೀರಕ್ಕೆ ರಾಜ್ಯ ಸ್ಥಾನಮಾನ : ಪ್ರತಿಕ್ರಿಯೆಗೆ 4 ವಾರಗಳ ಗಡುವು

**ನವದೆಹಲಿ:** ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯದ ಸ್ಥಾನಮಾನ ನೀಡುವಂತೆ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳ ಕುರಿತು ಪ್ರತಿಕ್ರಿಯೆ ನೀಡಲು ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರಕ್ಕೆ 4 ವಾರಗಳ ಗಡುವು ನೀಡಿದೆ. ಜಮ್ಮು ಮತ್ತು ಕಾಶ್ಮೀರಕ್ಕೆ ಶೀಘ್ರದಲ್ಲಿ ರಾಜ್ಯದ ಸ್ಥಾನಮಾನ ನೀಡಲು ಸೂಚಿಸುವಂತೆ ಕೋರಿ ಶಿಕ್ಷಣ ತಜ್ಞ ಝಹೂರ್ ಅಹಮದ್ ಭಟ್ ಮತ್ತು ಸಾಮಾಜಿಕ ಕಾರ್ಯಕರ್ತ ಅಹಮದ್ ಮಲ್ಲಿಕ್ ಸಲ್ಲಿಸಿದ್ದ ಅರ್ಜಿಗಳು ಸೇರಿ ಈ ಕುರಿತಾದ ಹಲವು ಅರ್ಜಿಗಳನ್ನು ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಮತ್ತು ನ್ಯಾಯಮೂರ್ತಿ ಕೆ.ವಿನೋದ್ ಚಂದ್ರನ್ ಅವರ ಪೀಠವು ವಿಚಾರಣೆ ನಡೆಸುತ್ತಿದೆ. ಇದೊಂದು ವಿಭಿನ್ನ ಸಮಸ್ಯೆ ಹಾಗಾಗಿ ಸಮಗ್ರ ಅವಲೋಕನದ ಅತ್ಯಗತ್ಯವಾಗಿದೆ. ಈ ಬಗ್ಗೆ ಚರ್ಚೆ ನಡೆಸಲಾಗುತ್ತಿದೆ ಎಂದು ಸರ್ಕಾರದ ಪರ ಹಾಜರಿದ್ದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ತಿಳಿಸಿದರು.

# ಶಿಷ್ಟಾಚಾರದ ಪ್ರಕಾರ ಎ.ಮಂಜು, ಸೂರಜ್ ದರ್ಶನ



» ಮೊದಲನೇ ಪುಟದಿಂದ

ಲಾವಣೆ ಮಾಡಿದ್ದಾರೆ. ಸಾಮಾನ್ಯ ಜನರಿಗೆ ದೇವಿ ದರ್ಶನಕ್ಕೆ ಒಳ್ಳೆಯ ವ್ಯವಸ್ಥೆ ಮಾಡಿದ್ದಾರೆ. ಇದನ್ನೇ ಮುಂದುವರೆಸಿಕೊಂಡು ಹೋಗಲಿ, ಯಾವುದೇ ಒತ್ತಡಕ್ಕೆ ಮಣಿಯ ಬಾರದು. ನಾವು ರಾಜಕಾರಣಿಗಳು ಬಾಗಿಲು ಹಾಕಿಕೊಂಡು ಪೂಜೆ ಮಾಡಬಾರದು, ಒಂದು ಬಾರಿ ಬಂದು ಹೋದರೆ ಸಾಕು, ಭಕ್ತರ ದರ್ಶನಕ್ಕೆ ಸಹಕಾರ ಕೊಡಬೇಕೆಂದು ತಿಳಿಸಿದರು.

ಹಾಸನಾಂಬ ದೇವಿ ದರ್ಶನ ಪಡೆದ ಮಾತನಾಡಿದ ವಿಧಾನ ಪರಿ ಷತ್ ಸದಸ್ಯ ಡಾ.ಸೂರಜ್ ರೇವಣ್ಣ ಅವರು, ದೇವಿಯ ದರ್ಶನ ಪಡೆಯಲು ಜಿಲ್ಲೆ, ರಾಜ್ಯದ ಮೂಲೆ ಮೂಲೆಗಳಿಂದ ಭಕ್ತರು ಬರುತ್ತಾರೆ. ಅವರೆಲ್ಲರಿಗೂ ತಾಯಿ ಒಳ್ಳೆಯದನ್ನು ಮಾಡಲಿ, ರೈತಾಪಿ, ಗ್ರಾಮೀಣ ಭಾಗದ ಜನರಿಗೆ ಕಾಲ ಕಾಲಕ್ಕೆ ಮಳೆ ಯಾಗಿ, ಬೆಳೆ ಬೆಳೆಯಲು ಅನುಕೂಲ ಕರವಾದ ವಾತಾವರಣವನ್ನು ತಾಯಿ ಅನುಗ್ರಹಿಸಲಿ ಎಂದರು.

ಈ ಬಾರಿಯ ಜಾತ್ರಾ ಮಹೋತ್ಸವ ವ್ಯವಸ್ಥಿತವಾಗಿ, ಶಿಸ್ತಾಗಿ ನಡೆಯುತ್ತಿದೆ. ಇದೇ ರೀತಿ ಮುಂದುವರೆಯ, ಒಟ್ಟು ಹದಿಮೂರು ದಿನ ತಾಯಿ ದರ್ಶನ ವಿರುತ್ತದೆ. ಅದಕ್ಕೆ ಎಲ್ಲಾ ರೀತಿಯ ಅವಕಾಶ ಮಾಡಿಕೊಟ್ಟಿದ್ದಾರೆ ಅದನ್ನು ಸದುಪಯೋಗ ಪಡಿಸಿಕೊಳ್ಳಬೇಕು. ಯಾವುದೇ ಗೊಂದಲ, ಘರ್ಷಣೆ ಇಲ್ಲದೆ ಸದುಪಯೋಗ ಪಡೆದು ಕೊಳ್ಳಲಿ. ವಿಶೇಷವಾಗಿ ನಮ್ಮ ಜಿಲ್ಲೆಗೆ ಇನ್ನಷ್ಟು ಅಭಿವೃದ್ಧಿ ಕಾರ್ಯಗಳು ಆಗಲಿ, ನಾನು ಶಿಷ್ಟಾಚಾರದ ವ್ಯವಸ್ಥೆ ಯಲ್ಲಿಯೇ ಬಂದು ದರ್ಶನ ಪಡೆದಿ ದ್ದೇನೆ. ಜಿಲ್ಲಾಡಳಿತ ಏನು ವ್ಯವಸ್ಥೆ ಮಾಡಿದೆಯೋ ಅದನ್ನು ನಾವೂ ಕೂಡ ಅದನ್ನು ಪಾಲಿಸಿದ್ದೇವೆ. ದೇವೇಗೌಡರು ಆರೋಗ್ಯವಾಗಿದ್ದು, ಇನ್ನೂ ಎರಡ್ಮೂರು ದಿನಗಳಲ್ಲಿ ಬಿಡುಗಡೆಯಾಗಲಿದ್ದಾರೆಂದು ತಿಳಿಸಿದರು.

## ಸನ್ಯಾಸಿ ಪ್ರಧಾನಿಯಾಗಲಿದ್ದಾರೆ: ಬ್ರಹ್ಮಾಂಡ ಗುರೂಜಿ

» ಮೊದಲನೇ ಪುಟದಿಂದ

ಇದಕ್ಕೆಲ್ಲಾ ಮುನ್ಸೂಚನೆಯಾಗಿದೆ. ಇದೇ ಕೊನೆಯ ವಿಶೇಷವಾದ ಸಂದರ್ಭವಾಗಿದ್ದು ಮುಂದೆ ಆಗುವ ಉಗ್ರ ಸ್ವರೂಪದ ಬಗ್ಗೆ ತಾಯಿ ಸೂಚನೆ ಕೊಟ್ಟಿದ್ದಾಳೆ.

ಜನರು ಆರೋಗ್ಯ ನೋಡಿಕೊಳ್ಳಬೇಕು. ಜಲಗಂಡಾಂತರ ಸಂಭವಿ ಸ ಲಿದ್ದು, ಘಟಪ್ರಭ, ಮಲಪ್ರಭಾ, ಗೋದಾವರಿ ನದಿಗಳು ದೇಶ 2 ಭಾಗ ಮಾಡುವಷ್ಟುತುಂಬುತ್ತೆಂದು ಹೇಳಿದರು.

ಈ ವರ್ಷ ಹಾಸನಾಂಬಗೆ ಕೊನೆಯ ವರ್ಷವಾಗಿದ್ದು, ಮುಂದಿನ ವರ್ಷದಿಂದ ಅಮ್ಮನವರ ಸಾನಿಧ್ಯ ಇಲ್ಲಿ ಇರುವುದಿಲ್ಲ. ಹಾಸನಾಂಬೆ ದರ್ಶನಕ್ಕೆ ಮುಂದಿನ ದಿನಗಳಲ್ಲಿ ಅವಕಾಶಗಳು ಅಡಚಣೆಯಾಗುವ ಸಾಧ್ಯತೆ ಇದೆ. 2025 ರಿಂದ 2032ರ ಅವಧಿಯಲ್ಲಿ ಸಿದ್ದೇಶ್ವರನ ಕೃಪೆಯಿಂದ ಘಟಪ್ರಭ ಪರಿವರ್ತನೆ ಆಗಲಿದೆ. ಈ ಸಮಯದಲ್ಲಿ ಏಳು ಜನ ಅಕ್ಕ-ತಂಗಿಯರು ಸೇರಲಿದ್ದಾರೆ. ಸಿದ್ದೇಶ್ವರನ ಕೃಪಾಶೀರ್ವಾದದಿಂದ ಮುಂದಿನ ದಿನಗಳಲ್ಲಿ ಮಹತ್ವದ ಬದಲಾವಣೆಗಳು ನಡೆಯಲಿವೆ. ರೇವಣ್ಣ ಸಿದ್ದೇಶ್ವರ, ಹಾಸನದ ಸಿದ್ದೇಶ್ವರ, ಜೇನುಕಲ್ ಸಿದ್ದೇಶ್ವರ ಸೇರಿ ವಿವಿಧ ಸಿದ್ದೇಶ್ವರರ ಶಿವನ ಶಕ್ತಿ ಒಂದು ಕಡೆ ಸೇರಲಿದೆ ಎಂದು ತಿಳಿಸಿದರು.

# ಅರೇಹಳ್ಳಿ ಪಟ್ಟಣದಲ್ಲಿ ತ್ಯಾಜ್ಯ ವಿಲೇವಾರಿ ಸಮಸ್ಯೆ

## ರಸ್ತೆ ಬದಿಯೇ ಕಸದ ರಾಶಿ | ಪೂರ್ಣಗೊಳ್ಳದ ತ್ಯಾಜ್ಯ ವಿಲೇವಾರಿ ಘಟಕ ಕಾಮಗಾರಿ

• ಪ್ರಜೋದಯ ವರದಿ

**ಅರೇಹಳ್ಳಿ:** ಪಟ್ಟಣವು ದಿನದಿಂದ ದಿನಕ್ಕೆ ಅಭಿವೃದ್ಧಿ ಪಥದಲ್ಲಿ ಸಾಗುತ್ತಿದ್ದರೂ, ತ್ಯಾಜ್ಯ ವಿಲೇವಾರಿ ವ್ಯವಸ್ಥೆ ಇನ್ನೂ ಸಂಪೂರ್ಣವಾಗಿ ಜಾರಿಯಾಗದಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.



ಪಂಚಾಯಿತಿ ವ್ಯಾಪ್ತಿಯ ಪ್ರತಿಯೊಂದು ಮನೆಗಳಿಂದ ತ್ಯಾಜ್ಯವನ್ನು ಸಂಗ್ರಹಿಸಿ ವ್ಯವಸ್ಥಿತ ವಾಗಿ ವಿಲೇವಾರಿ ಮಾಡುವ ಉದ್ದೇಶದಿಂದ, ಗ್ರಾಮ ಪಂಚಾಯಿತಿ ಕೆಲ ವರ್ಷಗಳ ಹಿಂದೆ ಪಟ್ಟಣದ ಹೊರವಲಯದ ಹಗ್ಗಡಿಹಳ್ಳಿ ರಸ್ತೆಯಲ್ಲಿ ತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣ ಕಾರ್ಯವನ್ನು ಆರಂಭಿಸಿತ್ತು. ನಾನಾ ಕಾರಣಗಳಿಂದ ಕಾಮಗಾರಿ ಅಂತಿಮ ಹಂತ ತಲುಪದೆ ವಿಳಂಬವಾಗಿದೆ.

ಈ ನಡುವೆ ಪಟ್ಟಣದ ಬಹುತೇಕ ಮನೆಗಳ ತ್ಯಾಜ್ಯವನ್ನು ಪಂಚಾಯಿತಿ ಸಿಬ್ಬಂದಿ ವಾಹನಗಳ ಮೂಲಕ ಸಂಗ್ರಹಿಸಿ ನಿಗದಿತ ಸ್ಥಳದಲ್ಲಿ ವಿಲೇವಾರಿ ಮಾಡುತ್ತಿದ್ದರೂ, ಕೆಲ ನಾಗರಿಕರು ಪಟ್ಟಣದ ಹೊರವಲಯದ ಲಿಂಗಾಪುರ ಗ್ರಾಮದ ಸ್ಮಶಾನದ ಹತ್ತಿರ ಸೇರಿ ವಿವಿಧ ರಸ್ತೆಗಳ ಬದಿಗಳಲ್ಲಿ ತ್ಯಾಜ್ಯವನ್ನು ಬಿಸಾಡುತ್ತಿರುವುದು ಕಂಡುಬಂದಿದೆ.

ಸಮರ್ಪಕವಾಗಿ ತ್ಯಾಜ್ಯ ವಿಲೇವಾರಿ ಮಾಡದೆ ಎಲ್ಲೆಂದರಲ್ಲಿ, ರಸ್ತೆ ಬದಿಯಲ್ಲಿ ತ್ಯಾಜ್ಯದ ರಾಶಿಗಳು ಗುಡ್ಡೆಯಾಗುತ್ತಿದ್ದು, ಪರಿಸರ ಮಾಲಿನ್ಯ ಉಂಟಾಗುತ್ತಿದೆ ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪಟ್ಟಣದ ಸುಚಿತ್ವ ಕಾಪಾಡಲು, ಪಂಚಾಯಿತಿ ಈ ಹಿಂದೆ ಮನೆಮನೆಗೆ ತ್ಯಾಜ್ಯ ಸಂಗ್ರಹ ಬಕೆಟ್‌ಗಳನ್ನು ವಿತರಿಸಿ, ಪ್ರತಿದಿನ ಪಟ್ಟಣದಿಂದ ಹಾಗು ವಾರಕ್ಕೆ ಎರಡು ಬಾರಿ ಹೊರವಲಯದ ಗ್ರಾಮಗಳಿಂದ ತ್ಯಾಜ್ಯ ಸಂಗ್ರಹಣೆ ವ್ಯವಸ್ಥೆ ಮಾಡಿತ್ತು. ಕೆಲವರ ನಿರ್ಲಕ್ಷ್ಯದಿಂದ ರಸ್ತೆಯ ಬದಿಗಳಲ್ಲಿ ತ್ಯಾಜ್ಯವನ್ನು ಬಿಸಾಡುವ ಪ್ರಕ್ರಿಯೆ ಮುಂದುವರಿದಿದೆ. ಪಂಚಾಯಿತಿಯಿಂದ ಹಲವು ಬಾರಿ ಆ ಸ್ಥಳಗಳಲ್ಲಿ ತ್ಯಾಜ್ಯವನ್ನು ತೆರವುಗೊಳಿಸಿ, ಸೂಚನಾ ಫಲಕಗಳನ್ನು ಅಳವಡಿಸಿದರೂ, ರಸ್ತೆ ಬದಿ ಕಸ ಎಸೆಯುವುದು ಮರುಕಳಿಸುತ್ತಲೇ ಇದೆ. ಇದರಿಂದ ನಿತ್ಯ ಸಂಚರಿಸುವ ನೂರಾರು ವಾಹನ ಸವಾರರು ಹಾಗು ಸಾರ್ವಜನಿಕರು ಮೂಗುಮುಚ್ಚಿಕೊಂಡು ರಸ್ತೆಯಲ್ಲಿ ಸಂಚರಿಸುವಂತಾಗಿದೆ.

ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ಕಠಿಣ ಕ್ರಮ ಕೈಗೊಳ್ಳದಿದ್ದರೆ, ಮುಂದಿನ ದಿನಗಳಲ್ಲಿ ಪಟ್ಟಣದ ವಿವಿಧ ಪ್ರದೇಶಗಳು ದೊಡ್ಡ ಮಟ್ಟದ ತ್ಯಾಜ್ಯ ತಾಣಗಳಾಗಿ ಮಾರ್ಪಡುವ ಭೀತಿ ಇದೆ. ಆದ್ದರಂದ ತ್ಯಾಜ್ಯ ವಿಲೇವಾರಿ ಘಟಕದ ಕಾಮಗಾರಿ ಶೀಘ್ರ ಪೂರ್ಣಗೊಂಡು, ನಿಯಮ ಉಲ್ಲಂಘಿಸುವವರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕೆಂದು ನಾಗರಿಕರು ಆಗ್ರಹಿಸಿದ್ದಾರೆ.

# ವೆನುಜುವೆಲಾದ ಮಾರಿಯಾಗೆ ಒಲಿದ ನೋಬೆಲ್ ಶಾಂತಿ ಪುರಸ್ಕಾರ

• ಪ್ರಜೋದಯ ವರದಿ



**ನಾರ್ವೆ:** ಪ್ರಸಕ್ತ ಸಾಲಿನ ನೋಬೆಲ್ ಶಾಂತಿ ಪುರಸ್ಕಾರ ಶುಕ್ರವಾರ ಪ್ರಕಟವಾಗಿದ್ದು ವೆನು ಜುವೆಲಾದ ವಿರೋಧ ಪಕ್ಷದ ನಾಯಕಿ ಮತ್ತು ಪ್ರಜಾಪ್ರಭುತ್ವ ಪರ ಹೋರಾಟ ಗಾರ್ತಿ ಮಾರಿಯಾ ಕೊರಿನಾ ಮಚಾದೊ ಭಾಜನರಾಗಿದ್ದಾರೆ.

ಅಮೇರಿಕಾ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ನೋಬೆಲ್ ಪ್ರಶಸ್ತಿಗೆ ತಮ್ಮನ್ನೇ ಆಯ್ಕೆ ಮಾಡ ಬೇಕೆಂದು ಬಹಿರಂಗವಾಗಿ ಹೇಳಿಕೆ ನೀಡಿ ದ್ದರು. ಪ್ರಶಸ್ತಿ ಕೈ ತಪ್ಪಿರುವುದರಿಂದ ಕುಪಿತಗೊಂಡಿರುವ ಅವರು ಶಾಂತಿಗಿಂತ ರಾಜ ಕೀಯವೇ ಹೆಚ್ಚಾಯಿತು ಎಂದು ಪ್ರತಿಕ್ರಿಯಿಸಿದ್ದಾರೆ.

**ಯಾರು ಮಾರಿಯಾ ಕೊರಿನಾ**

ವೆನೆಜುವೆಲಾದ ಜನರ ಪ್ರಜಾಸತ್ತಾತ್ಮಕ ಹಕ್ಕುಗಳನ್ನು ಪ್ರಚುರ ಪಡಿಸಲು ಮತ್ತು ಸರ್ವಾಧಿ ಕಾರದಿಂದ ಪ್ರಜಾ ಪ್ರಭುತ್ವದೆಡೆಗೆ ಶಾಂತಿಯುತವಾಗಿ ದೇಶವನ್ನು ಕೊಂಡೊಯ್ಯಲು ನಡೆಸಿದ ಹೋರಾಟಗಳಿಗಾಗಿ ಮಾರಿಯಾ ಅವರಿಗೆ ನೊಬೆಲ್ ಶಾಂತಿ ಪುರಸ್ಕಾರ ನೀಡಲಾಗುತ್ತಿದೆ ಎಂದು ನಾರ್ವೆಯ ನೊಬೆಲ್ ಸಮಿತಿಯ ಅಧ್ಯಕ್ಷ ಜಾರ್ಗೆನ್ ವಾಟ್ನೆ ಫ್ರಿಡ್‌ನೆಸ್ ಅವರು ಹೇಳಿದ್ದಾರೆ.

ನಿರಂಕುಶ ಆಡಳಿತದಿಂದಾಗಿ ಮಾನವೀಯತೆಯ ಅಧಃಪತನ ಮತ್ತು ಆರ್ಥಿಕ ಬಿಕ್ಕಟ್ಟನ್ನು ಎದುರುಸುತ್ತಿರುವ ವೆನೆಜುವೆಲಾದಲ್ಲಿ ಸಮರ್ಥ ವಿರೋಧ ಪಕ್ಷವಾಗಿ ಮಾರಿಯಾ ಕಾರ್ಯ ನಿರ್ವಹಿಸಿದ್ದಾರೆ. ಜೀವ ಬೆದರಿಕೆಗಳಿದ್ದರೂ ದೇಶಕ್ಕಾಗಿ ದೃಢವಾಗಿ ನಿಂತಿದ್ದಾರೆ. ದೌರ್ಜನ್ಯದ ವಿರುದ್ಧ ನಾಗರಿಕರು ತೋರುವ ಧೈರ್ಯಕ್ಕೆ ಅವರು ಅದ್ಭುತ ಉದಾಹರಣೆಯಾಗಿದ್ದಾರೆಂದು ಫ್ರಿಡ್‌ನೆಸ್ ಹೇಳಿದ್ದಾರೆ.

ವೆನೆಜುವೆಲಾದಲ್ಲಿ ಶಾಂತಿಯುತವಾಗಿ ಪ್ರಜಾಪ್ರಭುತ್ವವನ್ನು ಸ್ಥಾಪಿಸುವಲ್ಲಿ ಪ್ರತಿಪಕ್ಷಗಳು ಯಶಸ್ವಿಯಾಗುತ್ತವೆಂಬ ವಿಶ್ವಾಸವಿದೆ ಎಂದು ಮರಿಯಾ ಅವರು ಹೇಳಿದ್ದಾರೆ. ನಾನು ಪ್ರಶಸ್ತಿಗೆ ಅರ್ಹಳಲ್ಲ, ನಮ್ಮ ದೇಶದ ಜನರಿಗೆ ಸಂದ ಗೌರವವಿದು ಎಂದಿದ್ದಾರೆ.

**ಶ್ವೇತಭವನ ಕೆಂಡಾಮಂಡಲ**

ಪ್ರತಿಷ್ಠಿತ ನೊಬೆಲ್ ಶಾಂತಿ ಪ್ರಶಸ್ತಿ ಅಮೇರಿಕಾದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಕೈತಪ್ಪಿದ್ದಕ್ಕೆ ಶ್ವೇತಭವನ ನಾರ್ವೇಜಿಯನ್ ನೊಬೆಲ್ ಸಮಿತಿಯ ವಿರುದ್ಧ ವಾಗ್ದಾಳಿ ನಡೆಸಿದೆ.

ನೊಬೆಲ್ ಸಮಿತಿಯು ಶಾಂತಿಗಿಂತ ರಾಜಕೀಯವನ್ನು ಹೆಚ್ಚಾಗಿ ಇಷ್ಟಪಡುತ್ತದೆ ಎಂಬುದನ್ನು ಇದು ಸಾಬೀತುಪಡಿಸಿದೆ. ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಶಾಂತಿ ಒಪ್ಪಂದ, ಯುದ್ಧ ನಿಯಂತ್ರಣ ಮತ್ತು ಜೀವ ಉಳಿಸುವುದನ್ನು ಮುಂದುವರಿಸುತ್ತಾರೆ. ಅವರು ಮಾನವೀಯ ಹೃದಯ ಹೊಂದಿದ್ದಾರೆ ಮತ್ತು ಅವರು ಇಚ್ಛಾಶಕ್ತಿಯ ಸಂಪೂರ್ಣ ಬಲವಿರುವ ವ್ಯಕ್ತಿ. ಅವರಂತೆ ಯಾರೂ ಇರುವುದಿಲ್ಲ ಎಂದು ಹಾಡಿ ಹೊಗಳಿದೆ.

ಟ್ರಂಪ್ ಅವರು ಕಳೆದ ಜನವರಿಯಲ್ಲಿ ತಮ್ಮ ಎರಡನೇ ಅವಧಿಗೆ ಶ್ವೇತಭವನಕ್ಕೆ ಮರಳಿ ದಾಗಿನಿಂದ, ತಾವು ಹಲವಾರು ಸಂಘರ್ಷಗಳನ್ನು ಪರಿಹರಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದು, ನೊಬೆಲ್ ಶಾಂತಿ ಪ್ರಶಸ್ತಿಗೆ ಅರ್ಹರು ಎಂದು ಪದೇ ಪದೇ ಹೇಳುತ್ತಿದ್ದರು.

ನೊಬೆಲ್ ಶಾಂತಿ ಪ್ರಶಸ್ತಿ ಘೋಷಣೆಯ ಮುನ್ನಾ ದಿನದಂದು ಟ್ರಂಪ್ ತಮ್ಮ ಹೇಳಿಕೆಯನ್ನು ಪುನರುಚ್ಚರಿಸಿದರು. ಈ ವಾರ ಗಾಜಾದಲ್ಲಿ ಮೊದಲ ಹಂತದ ಕದನ ವಿರಾಮಕ್ಕೆ ಅವರು ಮಧ್ಯಸ್ಥಿಕೆ ವಹಿಸಿದ್ದು, ತಾವು ಕೊನೆಗೊಳಿಸಿದ ಎಂಟನೇ ಯುದ್ಧ ಎಂದು ಹೇಳಿದ್ದರು.

## ಹಾಸನಾಂಬ ಹೆಸರಿನಲ್ಲಿ ಕಾಂಗ್ರೆಸ್ ಜಾತ್ರೆ: ಎಎಪಿ

• ಪ್ರಜೋದಯ ವರದಿ

**ಹಾಸನ:** ಶಕ್ತಿ ದೇವತೆ ಹಾಸನಾಂಬ ಹೆಸರಿನಲ್ಲಿ ಕೊಳ್ಳೆ ಹೊಡೆಯುತ್ತಿರುವ ಅಧಿಕಾರಿಗಳು ಕಾಂಗ್ರೆಸ್ ಜಾತ್ರೆಯಾಗಿ ಪರಿವರ್ತಿಸಿದ್ದಾರೆಂದು ಎಎಪಿ ರಾಜ್ಯ ಉಪಾಧ್ಯಕ್ಷ ಅಗಿಲೆ ಯೋಗೀಶ್ ಅವರು ಆರೋಪಿಸಿದರು.



ಸುದ್ದಿಗೋಷ್ಟಿಯಲ್ಲಿ ಶುಕ್ರವಾರ ಮಾತನಾಡಿ, ಶಿಷ್ಟಾಚಾರ ಕಟ್ಟುನಿಟ್ಟಾಗಿ ಪಾಲಿಸುತ್ತೇವೆ. ಗಣ್ಯರ ಜೊತೆಗೆ ನಾಲ್ಕಕ್ಕಿಂತ ಹೆಚ್ಚು ಜನರನ್ನು ಒಳಗೆ ಬಿಡುವುದಿಲ್ಲ ಎಂದಿದ್ದ ಜಿಲ್ಲಾಧಿಕಾರಿ ಗುರುವಾರ ಕಾಂಗ್ರೆಸ್ ಕಾರ್ಯಕರ್ತರನ್ನು ಬಿಟ್ಟುಕೊಂಡಿದ್ದರು. ಅಧಿಕಾರಿಗಳು ದುಡ್ಡು ಮಾಡುವುದನ್ನೇ ಕಾಯಕವಾಗಿಸಿಕೊಂಡಿದ್ದಾರೆ. ಕೆ.ಎಸ್.ಲತಾಕುಮಾರಿ ತಮ್ಮ ಸ್ಥಾನಕ್ಕೆ ರಾಜೀ ನಾಮೆ ನೀಡಿ ಕಾಂಗ್ರೆಸ್ ಸೇರಿಕೊಳ್ಳುವುದು ಒಳ್ಳೆಯ ಕೆಲಸವೆಂದು ಟೀಕಿಸಿದರು.

ಹಾಸನಾಂಬ ದರ್ಶನಕ್ಕೆ ಸ್ಥಳೀಯರಿಗೆ ಸ್ಥಳೀಯರಿಗೆ ಅವಕಾಶ ನೀಡದಿದ್ದರೆ ಅ.15 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕಪ್ಪು ಬಾವುಟ ಪ್ರದರ್ಶಿಸಲಾಗುವುದು. ಜಿಲ್ಲಾಡಳಿತಕ್ಕೆ ಇನ್ನೂ ಮೂರು ದಿನ ಕಾಲಾವಕಾಶ ನೀಡುತ್ತೇನೆ. ಸ್ಥಳೀಯರಿಗೆ ಪ್ರಾಧ್ಯಾನತೆ ನೀಡದಿದ್ದರೆ ಹತ್ತು ಸಾವಿರ ಜನರೊಟ್ಟಿಗೆ ಪ್ರತಿಭಟನೆ ನಡೆಸುತ್ತೇನೆಂದು ಹೇಳಿದರು.

ಗುರುವಾರ ನಾವು ದೇಗುಲದ ಮುಂದೆ ಪ್ರತಿಭಟನೆ ನಡೆಸಿದರೂ ಏಕೆ ಪ್ರತಿಭಟನೆ ಮಾಡು ತ್ತಿದ್ದೀರಾ ಎಂದು ಕೇಳುವ ಸೌಜನ್ಯ ಜಿಲ್ಲಾಧಿಕಾರಿಗೆ ಇಲ್ಲ. ಹಾಸನಾಂಬ ಜಾತ್ರಾ ಮಹೋತ್ಸವದ ಎಲ್ಲಾ ಕಾಮಗಾರಿಗಳ ಟೆಂಡರ್ ಮಾರಾಟ ಮಾಡಿ ಚಿನ್ನ, ಬೆಳ್ಳಿ ಪದಕ ಉಡುಗೊರೆ ಪಡೆದಿದ್ದಾರೆ. ಟೆಂಡರ್ ಮಾರಾಟ ಮಾಡುವುದಕ್ಕಾಗಿಯೇ ಉಪವಿಭಾಗಾಧಿಕಾರಿ ಮಾರುತಿ ಅವರನ್ನು ಇಟ್ಟುಕೊಂಡಿದ್ದಾರೆ. ಮಾರುತಿ ಅವರಿಗೆ ವರ್ಗಾವಣೆಯಾ ಗಿದ್ದರೂ ಅವ್ಯವಹಾರಕ್ಕಾಗಿಯೇ ಮುಂದುವರಿದಿದ್ದಾರೆಂದು ದೂರಿದರು.

ಪಕ್ಷದ ಆನಂದ್, ಮಂಜುನಾಥ್, ಪಂಕಜ ಇದ್ದರು.


# ಯಶಸ್ವಿ ಜೈಸ್ವಾಲ್ ಅಮೋಘ ಶತಕ: 318ಕ್ಕೆ 2

• ಪ್ರಜೋದಯ ವರದಿ

**ದೆಹಲಿ:** ದೆಹಲಿಯ ಅರುಣ್ ಜೇಟ್ಲಿ ಅಂತರರಾಷ್ಟ್ರೀಯ ಕ್ರಿಕೆಟ್ ಮೈದಾನದಲ್ಲಿ ನಡೆದ ಭಾರತ ಹಾಗೂ ವೆಸ್ಟ್ ಇಂಡೀಸ್ ನಡುವಿನ 2ನೇ ಟೆಸ್ಟ್‌ನ ಮೊದಲ ದಿನದಾಟದಲ್ಲಿ ಟೀಂ ಇಂಡಿಯಾ 3182 ಬೃಹತ್ ಮೊತ್ತ ಕಲೆಹಾಕಿದೆ.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಲು ನಿರ್ಧರಿಸಿದ ಭಾರತದ ನಾಯಕನ ಆಯ್ಕೆಯನ್ನು ಸಮರ್ಥಿಸಿಕೊಂಡ ಬ್ಯಾಟರ್‌ಗಳು ರನ್ ಗುಡ್ಡೆ ಹಾಕಿದರು. ಯಶಸ್ವಿಜೈಸ್ವಾಲ್ (ಅಜೇಯ 173), ಸಾಯಿಸುದರ್ಶನ್ (87), ಕೆ.ಎಲ್.ರಾಹುಲ್ (38) ಹಾಗೂ ನಾಯಕ ಶುಭಮನ್ ಗಿಲ್ (ಅಜೇಯ 20) ರನ್ ಕಲೆಹಾಕಿದರು.

ದಿನವಿಡೀ ಬೌಲಿಂಗ್ ಮಾಡಿದ ವಿಂಡೀಸ್ ಪರ ಜೋಮೆಲ್ ವಾರಿಕನ್ ಮಾತ್ರ 2 ವಿಕೆಟ್ ಪಡೆದುಕೊಂಡರು. ಇನ್ನೂ ಆರಂಭಿಕ ಬ್ಯಾಟರ್ ಯಶಸ್ವಿ ಜೈಸ್ವಾಲ್ ಟೆಸ್ಟ್ ಕ್ರಿಕೆಟ್ ವೃತ್ತಿ ಜೀವನದಲ್ಲಿ 7ನೇ ಶತಕ ದಾಖಲಿಸಿ ಅಜೇಯರಾಗಿ ಉಳಿದಿದ್ದಾರೆ. ಅವರ ಜೊತೆಗೆ ನಾಯಕ ಶುಭಮನ್ ಗಿಲ್ ಕೂಡ 20 ರನ್ ಗಳಿಸಿ 2ನೇ ದಿನಕ್ಕೆ ಬ್ಯಾಟಿಂಗ್ ಕಾಯ್ದು ಕೊಂಡಿದ್ದಾರೆ.



**ಭಾರತ 318/2**

ಮೊದಲ ದಿನದಂತ್ಯಕ್ಕೆ ಭಾರತ 2 ವಿಕೆಟ್ ನಷ್ಟಕ್ಕೆ 318 ರನ್ ಗಳಿಸಿದೆ. ಜೈಸ್ವಾಲ್ 253 ಎಸೆತಗಳಲ್ಲಿ ಅಜೇಯ 173 ರನ್ ಗಳಿಸಿ (22 ಬೌಂಡರಿ) ಕ್ರೀಸಿನಲ್ಲಿದ್ದಾರೆ. ಸಾಯಿ ಸುದರ್ಶನ್ 87 ರನ್ ಗಳಿಸಿ ಔಟ್ ಆದರು.

### ಸಚಿನ್ ದಾಖಲೆ ಮುರಿದ ಜೈಸ್ವಾಲ್

ಪ್ರವಾಸಿ ವೆಸ್ಟ್ ಇಂಡೀಸ್ ವಿರುದ್ಧ ನಡೆದ 2ನೇ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾದ ಎಡಗೈ ಆರಂಭಿಕ ಬ್ಯಾಟರ್ ಯಶಸ್ವಿ ಜೈಸ್ವಾಲ್ ಅಮೋಘ ಶತಕದ ಸಾಧನೆ ಮಾಡಿದ್ದಾರೆ. ಇದು ಟೆಸ್ಟ್ ಕ್ರಿಕೆಟ್‌ನಲ್ಲಿ ಜೈಸ್ವಾಲ್ ಅವರ ಏಳನೇ ಶತಕವಾಗಿದೆ. ಈ ಪೈಕಿ ಐದನೇ ಸಲ 150ಕ್ಕೂ ಹೆಚ್ಚು ರನ್‌ಗಳ ಸಾಧನೆ ಮಾಡಿದ್ದಾರೆ.ಆ ಮೂಲಕ 23ರ ಹರೆಯದ ಜೈಸ್ವಾಲ್, ದಿಗ್ಗಜ ಸಚಿನ್ ತೆಂಡೂಲ್ಕರ್ ದಾಖಲೆಯನ್ನು ಮುರಿದಿದ್ದಾರೆ.
24ನೇ ವರ್ಷಕ್ಕೆ ಕಾಲಿರಿಸುವುದಕ್ಕೂ ಮೊದಲು ಅತಿ ಹೆಚ್ಚು 150+ ರನ್ ಸಾಧನೆ ಮಾಡಿದವರ ಪಟ್ಟಿಯಲ್ಲಿ ಆಸ್ಟ್ರೇಲಿಯಾದ ದಂತಕಥೆ ಡಾನ್ ಬ್ರಾಡ್ಮನ್ ಅಗ್ರಸ್ಥಾನದಲ್ಲಿದ್ದಾರೆ. ಬ್ರಾಡ್ಮನ್ ಎಂಟು ಸಲ 150ಕ್ಕೂ ಹೆಚ್ಚು ರನ್‌ಗಳ ಸಾಧನೆ ಮಾಡಿದ್ದರು. ಜೈಸ್ವಾಲ್ ನಂತರದ ಸ್ಥಾನದಲ್ಲಿರುವ ಭಾರತದ ಸಚಿನ್ ತೆಂಡೂಲ್ಕರ್, ಪಾಕಿಸ್ತಾನದ ಜಾವೇದ್ ಮಿಯಾಂದಾದ್ ಹಾಗೂ ದಕ್ಷಿಣ ಆಫ್ರಿಕಾದ ಗ್ರೇಮ್ ಸ್ಮಿತ್ ತಲಾ ನಾಲ್ಕು ಸಲ 150ರ ಗಡಿ ತಲುಪಿದ್ದರು.

## ಅಪರಾಧ ತಡೆ ಪ್ರತಿಯೊಬ್ಬರ ಕರ್ತವ್ಯ



• ಪ್ರಜೋದಯ ವರದಿ

**ಹಾಸನ:** ಅಪರಾಧ ತಡೆಗಟ್ಟುವಲ್ಲಿ ಪ್ರತಿಯೊಬ್ಬರ ಪಾತ್ರ ಮುಖ್ಯವಾಗಿದೆಯೆಂದು ಹಿರಿಯ ಸಿವಿಲ್ ನ್ಯಾಯಾಧೀಶೆ ಹಾಗು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಜಿ.ಕೆ.ದಾಕ್ಷಾಯಿಣಿ ಅವರು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ನಗರದ ಗುಡ್ ಸಿಟಿಜನ್ ಪದವಿ ಮತ್ತು ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪ್ರಸ್ತುತ ಸಮಾಜದಲ್ಲಿ ಹೆಚ್ಚುತ್ತಿರುವ ಅಪರಾಧ ಕೃತ್ಯಗಳನ್ನು ತಡೆಯಬೇಕಾದರೆ ಸಂಬಂಧಪಟ್ಟ ಇಲಾಖೆಯೊಂದಿಗೆ ಕೈಜೋಡಿಸಬೇಕು. ಕಾನೂನು ಬಾಹಿರ ಚಟುವಟಿಕೆ ಕಂಡುಬಂದಾಗ ಅಧಿಕಾರಿಗಳಿಗೆ ಮಾಹಿತಿ ನೀಡ ಬೇಕೆಂದರು.

ಗುಡ್ ಸಿಟಿಜನ್ ಪದವಿ ಕಾಲೇಜು ಪ್ರಾಂಶುಪಾಲ ಹೇಮಂತ್ ಕುಮಾರ್ ಅಧ್ಯಕ್ಷತೆ ವಹಿಸಿ ದ್ದರು. ಜಿಲ್ಲಾ ಆರೋಗ್ಯ ಇಲಾಖೆಯ ಸಾಮಾಜಿಕ ಕಾರ್ಯಕರ್ತೆ ವಿಮಲ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕಲ್ಯಾಣ ಇಲಾಖೆಯ ರೂಪವತಿ, ಉಪನ್ಯಾಸಕರಾದ ಶ್ರೀನಿವಾಸ್, ಸಂಜಯ್ ಕುಮಾರ್ ಇತರರಿದ್ದರು.

## ಇಂದು ಆರ್ಥ್ರೈಟ್ಸ್ ದಿನದ ಪ್ರಯುಕ್ತ ವಾಕಥಾನ್

• ಪ್ರಜೋದಯ ವರದಿ

**ಹಾಸನ:** ವಿಶ್ವ ಆರ್ಥ್ರೈಟ್ಸ್ (ಸಂಧಿ ವಾತ) ದಿನದ ಪ್ರಯುಕ್ತ ಅ.11ರ ಶನಿವಾರ ಬೆಳಿಗ್ಗೆ 8 ಗಂಟೆಗೆ ನಗರದ ಮಹಾರಾಜಾ ಪಾರ್ಕ್‌ನಿಂದ ಇಂಡಿಯಾನ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆವರೆಗೆ ವಾಕಥಾನ್ ಏರ್ಪಡಿಸಲಾಗಿದೆ ಎಂದು ಆಸ್ಪತ್ರೆ ಕೀಲು ಮತ್ತು ಮೂಳೆ ತಜ್ಞ ಡಾ|| ನಯೀಮ್ ಸಿದ್ಧಿಕ್ ಅವರು ತಿಳಿಸಿದರು.



ಸುದ್ದಿಗೋಷ್ಟಿಯಲ್ಲಿ ಶುಕ್ರವಾರ ಮಾತನಾಡಿ, ಸಂಧಿವಾತ ಸಮಸ್ಯೆಯನ್ನು ಸಾರ್ವಜನಿಕರು ಹಗುರವಾಗಿ ಪರಿಗಣಿಸುತ್ತಾರೆ. ಆರಂಭದಲ್ಲೇ ಚಿಕಿತ್ಸೆ ಮೂಲಕ ಕಾಯಿಲೆ ಗುಣಪಡಿಸಿಕೊಳ್ಳಬಹುದಾದರೂ ನಿರ್ಲಕ್ಷ್ಯದಿಂದ ಶಸ್ತ್ರಚಿಕಿತ್ಸೆಗೆ ಒಳಗಾಗುವ ಪರಿಸ್ಥಿತಿ ಸೃಷ್ಟಿಸಿಕೊಳ್ಳುತ್ತಾರೆ. ಈ ಬಗ್ಗೆ ಜಾಗೃತಿ ಮೂಡಿಸಲು ವಾಕಥಾನ್ ಹಮ್ಮಿಕೊಂಡಿದ್ದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ|| ಅನಿಲ್ ಅವರು ಚಾಲನೆ ನೀಡಲಿದ್ದಾರೆಂದರು.

ದೇಹದಲ್ಲಿ ರೋಗ ನಿರೋಧಕ ಶಕ್ತಿಯ ಹೋರಾಟ ಕಡಿಮೆಯಾದಾಗ ಮೂಳೆಗಳು ಬಲ ಹೀನಗೊಳ್ಳುತ್ತವೆ. ವೈರಸ್‌ಗಳ ವಿರುದ್ಧ ಹೋರಾಡಲು ಸಾಧ್ಯವಾಗದೆ ಇದ್ದಾಗ ಸಂಧಿವಾತ ಕಾಣಿಸಿಕೊಳ್ಳಬಹುದು. ಈ ಕಾಯಿಲೆಗೆ ವಂಶಪಾರಂಪರ್ಯವೂ ಕಾರಣವಿದ್ದಿರಬಹುದು. ಜೀವನ ಶೈಲಿ ಹಾಗು ಆಹಾರ ಪದ್ಧತಿಯಿಂದ ಸಂಧಿವಾತ ಸಮಸ್ಯೆ ಉಲ್ಬಣಿಸುತ್ತದೆಂಬುದು ಸುಳ್ಳು ಎಂದು ಮಾಹಿತಿ ನೀಡಿದರು.

ಇಂಡಿಯಾನ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಸುಸಜ್ಜಿತ ಉಪಕರಣಗಳಿದ್ದು ಶಸ್ತ್ರ ಚಿಕಿತ್ಸೆ ಮಾಡಲಾಗುತ್ತದೆ. ಕಾರ್ಯಕ್ರಮದ ಅಂಗವಾಗಿ ಅ.12 ರಂದು 10 ರೋಗಿಗಳಿಗೆ ಉಚಿತ ಶಸ್ತ್ರ ಚಿಕಿತ್ಸೆ ಹಮ್ಮಿಕೊಳ್ಳಲಾಗಿದೆ. ಜೊತೆಗೆ ಕಾಯಿಲೆಕುರಿತು ಅರಿವು ಕಾರ್ಯಕ್ರಮ ಆಯೋಜಿಸಲಾಗಿ'ಯೆಂದರು.

ಆಸ್ಪತ್ರೆಯ ಕೆ.ಆರ್.ಪ್ರದೀಪ್ ಹಾಜರಿದ್ದರು.

### ಚಿನ್ನಾಭರಣ ಕಳವು

• ಪ್ರಜೋದಯ ವರದಿ

**ಬೇಲೂರು:** ಮನೆಯ ಬೀಗ ಮುರಿದು ಒಳನುಗ್ಗಿರುವ ಕಳ್ಳರು ಬೀರುವಿನಲ್ಲಿಟ್ಟಿದ್ದ ನಗದು ಸೇರಿ 1.45 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ತಾಲ್ಲೂಕಿನ ಹನಿಕೆ ಗ್ರಾಮದಲ್ಲಿ ನಡೆದಿದೆ.ಲೋಕೇಶ್ ಎಂಬುವವರು ಮನೆಗೆ ಬೀಗ ಹಾಕಿಕೊಂಡು ಅ.7ರಂದು ಸಂಬಂಧಿಕರ ಮನೆಗೆ ತೆರಳಿದ್ದರು. ಸಂಜೆ 5 ಗಂಟೆಗೆ ವಾಪಾಸ್ಸಾದಾಗ ಕಳ್ಳತನವಾಗಿರುವುದು ತಿಳಿದಿದೆ. ಬೀರುವಿನಲ್ಲಿ ಟ್ಟಿದ್ದ 60 ಸಾವಿರ ರೂ. ನಗದು ಹಣ ಹಾಗು 95 ಸಾವಿರ ರೂ. ಬೆಲೆಯ 9 ಗ್ರಾಂ ಚಿನ್ನಾಭರಣ ಕದ್ದಿದ್ದಾರೆ. ಜೊತೆಗೆ ಹೆಚ್‌ಪಿ ಕಂಪನಿಯ ಒಂದು ಸಿಲಿಂಡರ್ ಕಳವು ಮಾಡಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮಾನವೀಯ ಮೌಲ್ಯ ಕಲಿಸುವುದೇ ನಿಜವಾದ ಶಿಕ್ಷಣ

• ಪ್ರಜೋದಯ ವರದಿ

**ಅರಸೀಕೆರೆ:** ಮಾನವೀಯ ಮೌಲ್ಯಗಳ ಪ್ರತಿಪಾದನೆ ಶಿಕ್ಷಣದ ಧ್ಯೇಯವಾಗಬೇಕೆಂದು ಯಳನಾಡು ಜ್ಞಾನಪ್ರಭು ಶ್ರೀ ಸಿದ್ದರಾಮ ದೇಶೀಕೇಂದ್ರ ಸ್ವಾಮೀಜಿ ಹೇಳಿದರು.

ನಗರದ ವಿವೇಕಾನಂದ ಶಿಕ್ಷಣ ಮಹಾವಿದ್ಯಾಲಯದಲ್ಲಿ ಶುಕ್ರವಾರ ನಿವೃತ್ತ ಪ್ರಾಧ್ಯಾಪಕ ಪ್ರೊ.ಎಸ್.ಜಿ.ಚಂದ್ರೇಗೌಡ ಅವರ ಅಧ್ಯಾಪನ ಫಲ ಕೃತಿ ಬಿಡುಗಡೆ ಸಮಾರಂಭದಲ್ಲಿ ಮಾತ ನಾಡಿ, ಸತ್ಯ ಹೇಳುವುದು, ತೊಂದರೆಗೆ ಸಿಲುಕಿದವರ ನೆರವಿಗೆ ಧಾವಿಸಿದರೆ ಮಾತ್ರವೇ ಶಿಕ್ಷಣ ಪಡೆದಿದ್ದಕ್ಕೆ ಸಾರ್ಥಕತೆ ಬರಲಿದೆ. ಕೆಲ ಸಂದರ್ಭದಲ್ಲಿ ಸತ್ಯ ಹೇಳುವುದು ಕೂಡ ಕಷ್ಟ ಎಂಬುದು ಅನುಭವಕ್ಕೆ ಬಂದಿದೆ. ಜ್ಞಾನ, ವಿಜ್ಞಾನದ ಯುಗದಲ್ಲಿ ಮಾನವೀಯ ಮೌಲ್ಯಗಳನ್ನು ಮರೆಯ ಬಾರದು. ಸೇವೆಯಲ್ಲಿ ತೊಡಗಿದ ಶಿಕ್ಷಕ ಸದಾ ವಿದ್ಯಾರ್ಥಿ ಎನ್ನುವ ಅಂಶ ಮನಗಂಡು ಬೋಧನೆಯಲ್ಲಿ ತೊಡಗಿಸಿಕೊಂಡರೆ ಮಾತ್ರವೇ ಯಶಸ್ಸು ಗಳಿಸಲು ಸಾಧ್ಯವೆಂದರು.

ದೇಶದ ಭವಿಷ್ಯ ಶಾಲೆ ಕಾಲೇಜುಗಳಲ್ಲಿ ನಿರ್ಮಾಣವಾಗಲಿದೆ ಎಂದು ಅನೇಕ ದಾರ್ಶನಿಕರು, ಶಿಕ್ಷಣ ತಜ್ಞರು ಹೇಳಿರುವುದು ಅರ್ಥಪೂರ್ಣವಾಗಿದೆ. ವಿವೇಕಾನಂದ ಬಿಇಡಿ ಕಾಲೇಜಿನಲ್ಲಿ ವ್ಯಾಸಂಗ ಮಾಡಿದ ಸಹಸ್ರಾರು ವಿದ್ಯಾರ್ಥಿಗಳು ಶಿಕ್ಷಕ ವೃತ್ತಿಯಲ್ಲಿ ತೊಡಗಿಸಿಕೊಂಡಿದ್ದಾರೆ. ಕೆಲವರು ನಿವೃತ್ತರಾಗಿದ್ದರೆ ಮತ್ತೆ ಕೆಲವರು ಸೇವಾ ನಿರತರಾಗಿದ್ದಾರೆ. ಇನ್ನಷ್ಟು ಮಂದಿ ಉನ್ನತಾಧಿಕಾರಿಗಳಾಗಿರುವುದು ಹೆಮ್ಮೆಯ ಸಂಗತಿ. ಶಿಕ್ಷಕ ಸದಾ ವಿದ್ಯಾರ್ಥಿಯೆಂಬ ಮನೋ ಭಾವ ಹೊಂದಿದ್ದರೆ ಮಾತ್ರವೇ ಅಧ್ಯಾಪನವೆಂಬ ಹೆಸರಿಗೆ ಸಾರ್ಥಕತೆ ಬರಲಿದೆ. ಸುದೀರ್ಘ ಸೇವೆಯ ಬಳಿಕವೂ ಪ್ರೊ.ಎಸ್.ಜಿ.ಚಂದ್ರೇಗೌಡ ಬರವಣಿಗೆಯಲ್ಲಿ ತೊಡಗಿಸಿಕೊಂಡಿದ್ದು ಎಲ್ಲರಿಗೂ ಮೇಲ್ಪಂಕ್ತಿ ಹಾಕಿಕೊಟ್ಟಿದ್ದಾರೆಂದರು.




ಅಧ್ಯಾಪನ ಫಲ ಕೃತಿ ಬಿಡುಗಡೆ ಮಾಡಿದ ನಿವೃತ್ತ ಪ್ರಾಂಶುಪಾಲ ಪ್ರೊ.ಬಿ.ಕೆಂಚವೀರಯ್ಯ ಅವರು ಮಾತನಾಡಿ, ದಶಕಗಳ ಹಿಂದೆ ಆರಂಭಿಸಿದ್ದ ಕಾಲೇಜು ಹೆಮ್ಮರವಾಗಿ ಬೆಳೆದಿದೆ. ನಿರೀಕ್ಷೆಗೂ ಮೀರಿದ ಶಿಕ್ಷಕ ಸಮುದಾಯವನ್ನು ಕೊಡುಗೆಯಾಗಿ ನೀಡಿದೆ ಎಂದರೆ ಅತಿಶಯೋಕ್ತಿಯಲ್ಲ. ಪ್ರಾಧ್ಯಾಪಕರ ಅವಿರತ ಪರಿಶ್ರಮದಿಂದ ಎಲ್ಲವೂ ಸಾಧ್ಯವಾಗಿದೆ. ಎಲ್ಲರೂ ಒಟ್ಟಾಗಿ ಕಾಲೇಜಿನ ಕೀರ್ತಿಯನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯಬೇಕೆಂದು ಕಿವಿಮಾತು ಹೇಳಿದರು.

ಲೇಖಕ ಪ್ರೊ.ಎಸ್.ಜಿ.ಚಂದ್ರೇಗೌಡ ಅವರು ಮಾತನಾಡಿ, ಜೀವನ ಎನ್ನುವ ಮೂರಕ್ಷರದಲ್ಲಿ ಎಲ್ಲವೂ ಅಡಗಿದೆ ಎಂಬುದನ್ನು ಹೇಳಿಕೊಡುವುದೇ ನಿಜವಾದ ಅಧ್ಯಾಪನವಾಗಿದೆ. ಗಂಡ ಗದ್ಯವಾದರೆ, ಹೆಂಡತಿ ಪದ್ಯ. ಇಬ್ಬರಿಗೂ ಜನಿಸಿದ ಮಕ್ಕಳು ರಗಳೆ ಎನ್ನುವ ಮೂಲಕ ಬೋಧನೆ ಔಚಿತ್ಯವನ್ನು ಹಾಸ್ಯದ ಮೂಲಕವೇ ವಿವರಿಸಿದರು. ನಿವೃತ್ತ ಪ್ರಾಂಶುಪಾಲ ಪ್ರೊ.ಕಪನೇಗೌಡ ಹಾಗು ನಿವೃತ್ತ ಪ್ರಾಧ್ಯಾಪಕ ಪ್ರೊ.ಶ್ರೀವಾಸ್ತವ ಅಧ್ಯಾಪನ ಫಲ ಕೃತಿಯನ್ನು ಸೂಕ್ತ ನಿದರ್ಶನ ಸಹಿತ ವಿಮರ್ಶಿಸಿದರು. ಪ್ರಾಂಶುಪಾಲ ಡಾ.ಮಲ್ಲಿಕಾರ್ಜುನ ಕುಡುವಕ್ಕಲಗಿ ಮಾತನಾಡಿದರು. ಆಯೋಜಕ ಎಂ.ಜಿ.ಸಿದ್ದರಾಮಯ್ಯ ಕಾಲೇಜಿನ ಹಿರಿಯ ವಿದ್ಯಾರ್ಥಿಗಳು ಅನಿಸಿಕೆ ಹಂಚಿಕೊಂಡರು.

ಡಾ.ಬಸವರಾಜ್, ಶೇಖರ್ ಸಂಕೋಡನಹಳ್ಳಿ, ವಿಜಯಕುಮಾರ್, ಬಿ.ಆರ್.ಶಶಿಧರ್, ಅರುಣ್ ಕುಮಾರ್, ರೇಖಾ ಹಾಗು ಇತರರಿದ್ದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019